# ಕನ್ನಡ ಪೋಸ್ಟ್

ಸಂಪಾದಕ : ಮಂಜು ಬನವಾಸೆ

KANNADA POST | ಇದು ಸುದ್ದಿ ವಿಲಾಸ | ಕನ್ನಡ ದಿನಪತ್ರಿಕೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.02 | Issue. 44 | Pages. 2 | Date: 13-01-2026, TUESDAY | RNI NO: KARKAN/2024/89601 | Kannada Daily

ಸಂಪುಟ : 02 – ಸಂಚಿಕೆ : 44 – ಪುಟಗಳು : 2 | 13-01-2026 | ಮಂಗಳವಾರ | Ph: 8762954248 | ದರ : ₹1


## ಹಾಸನದಲ್ಲಿ ರಾಜ್ಯ ಮಟ್ಟದ ಆಲೂಗಡ್ಡೆ ಮೇಳಕ್ಕೆ ಸಿದ್ಧತೆ

### ಜ. 26–27 ರಂದು ಕಾರ್ಯಕ್ರಮ | ಡಿಸಿ ಕಚೇರಿಯಲ್ಲಿ ಪೋಸ್ಟರ್ ಬಿಡುಗಡೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್




ಹಾಸನ: ಜಿಲ್ಲೆಯ ಪ್ರಮುಖ ವಾಣಿಜ್ಯ ಬೆಳೆ ಆಲೂಗಡ್ಡೆ ಪುನಶ್ಚೇತನ ನೀಡುವ ಉದ್ದೇಶದಿಂದ ಜ. 26 ಹಾಗೂ 27 ರಂದು ರಾಜ್ಯ ಮಟ್ಟದ ಆಲೂಗಡ್ಡೆ ಮೇಳ ಹಮ್ಮಿಕೊಳ್ಳಲಾಗಿದೆ ಎಂದು ಸಂಸದ ಶ್ರೇಯಸ್ ಪಟೇಲ್ ಹೇಳಿದರು.

ಜಿಲ್ಲಾಧಿಕಾರಿ ಕಚೇರಿಯಲ್ಲಿ ಸೋಮವಾರ ಮೇಳದ ಪೋಸ್ಟರ್ ಬಿಡುಗಡೆ ಸಮಾರಂಭದಲ್ಲಿ ಮಾತನಾಡಿದ ಅವರು, ನಗರದ ಹೊಸ ಬಸ್ ನಿಲ್ದಾಣ ಸಮೀಪದ ಹಾಸನಾಂಬ ಉದ್ಯಾನವನದಲ್ಲಿ ಮೇಳ ನಡೆಯಲಿದೆ. ತೋಟಗಾರಿಕೆ ಇಲಾಖೆ, ಎಪಿಎಂಸಿ, ವರ್ತಕರ ಸಂಘ, ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಹಾಗೂ ವಿವಿಧ ಸಂಘ ಸಂಸ್ಥೆಗಳ ನೆರವಿನಿಂದ ಮೇಳ ಹಮ್ಮಿಕೊಳ್ಳಲಾಗಿದೆಯೆಂದರು. ಜಿಲ್ಲೆಯ ಪ್ರಮುಖ ವಾಣಿಜ್ಯ ಬೆಳೆಯಾದ ಆಲೂಗಡ್ಡೆಯನ್ನು 50 ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ಬೆಳೆಯಲಾಗುತ್ತಿತ್ತು. ವರ್ಷಗಳುರುಳಿದಂತೆ ಬಿತ್ತನೆ ಪ್ರಮಾಣ 5 ಸಾವಿರ ಹೆಕ್ಟೇರ್‌ಗೆ ಕುಸಿದಿದೆ. ಹಾಸನದ ಆಲೂಗಡ್ಡೆ ರಾಜ್ಯ ಮಾತ್ರವಲ್ಲದೆ ದೇಶಕ್ಕೆ ಪ್ರಸಿದ್ಧಿಯಾಗಿತ್ತು. ಆ ವೈಭವ ಮರುಕಳಿಸಬೇಕೆಂದರೆ ರೈತರಿಗೆ ಅರಿವು ಮೂಡಿಸುವ ಕೆಲಸ ತುರ್ತಾಗಿ ಆಗಬೇಕಿದೆ. ಅದಕ್ಕಾಗಿ ಮೇಳ ಹಮ್ಮಿಕೊಂಡಿದ್ದು, 60 ರಿಂದ 70 ಮಳಿಗೆ ತೆರೆಯಲಾಗುತ್ತಿದೆ. ರಾಜ್ಯ ಹಾಗೂ ಹೊರ ರಾಜ್ಯದ ತಜ್ಞರು ಮಾಹಿತಿ ನೀಡಲಿದ್ದಾರೆ ಎಂದರು.

ಆಲೂಗಡ್ಡೆ ಬೆಳೆಯ ಹೊಸ ತಳಿಗಳನ್ನು ರೈತರಿಗೆ ಪರಿಚಯಿಸುವುದು, ಸುಧಾರಿತ ಸಸ್ಯ ಸಂರಕ್ಷಣಾ–ಔಷಧ ವಿಧಾನಗಳ ಬಗ್ಗೆ ಅರಿವು, ಬೇಸಾಯದಲ್ಲಿ ಯಾಂತ್ರೀಕರಣ, ಆಲೂಗಡ್ಡೆ ಬೆಳೆಯ ಕುರಿತು ಅನೇಕ ವಿಷಯಗಳ ಚರ್ಚಿಸಲು ಕಾರ್ಯಕ್ರಮ ನೆರವಾಗಲಿದೆ.

ಚಿಕ್ಕಮಗಳೂರು, ದಾವಣಗೆರೆ, ಬೆಳಗಾವಿ ಸೇರಿ ವಿವಿಧ ಜಿಲ್ಲೆಗಳಿಂದ ತಜ್ಞರು ಭಾಗವಹಿಸಲಿದ್ದಾರೆ ಎಂದರು.

ತೋಟಗಾರಿಕೆ ಇಲಾಖೆ ಜಂಟಿ ನಿರ್ದೇಶಕ ಯೋಗೇಶ್ ಮಾತನಾಡಿ, ಜಿಲ್ಲೆಯ ಪ್ರಮುಖ ವಾಣಿಜ್ಯ ಬೆಳೆಯಾಗಿದ್ದ ಆಲೂಗಡ್ಡೆ ಬಿತ್ತನೆ ಪ್ರಮಾಣ ವರ್ಷದಿಂದ ವರ್ಷಕ್ಕೆ ಕುಸಿಯುತ್ತಿದ್ದು, ಅದಕ್ಕೆ ಕಾರಣ ಹಾಗು ಪರಿಹಾರ ಕಂಡುಕೊಳ್ಳಲು ಕಾರ್ಯಕ್ರಮ ಆಯೋಜಿಸಲಾಗಿದೆ.

ಬಿತ್ತನೆ ಆಲೂಗಡ್ಡೆಗೆ ಪಂಜಾಬ್‌ನ ಜಲಂಧರ್ ಜಿಲ್ಲೆಯನ್ನೇ ನಾವು ಅವಲಂಬಿಸಿದ್ದೇವೆ. ಈ ಮೇಳಕ್ಕೆ ಅಲ್ಲಿನ ರೈತ ಪ್ರತಿನಿಧಿಗಳನ್ನು ಆಹ್ವಾನಿಸಿದ್ದು ಮಾಹಿತಿ ನೀಡಲಿದ್ದಾರೆ.

ಶಿವಾಲ್ಲಿ ಮತ್ತಿತರ ಕಡೆಯ ಕಂಪನಿಗಳು ಭಾಗಿಯಾಗಲಿವೆ. ಆಲೂಗಡ್ಡೆ ಸಂಸ್ಕರಣೆ, ಬಿತ್ತನೆ, ಕಟಾವು ಕುರಿತು ವೈಜ್ಞಾನಿಕ ಮಾಹಿತಿ ನೀಡಲಾಗುತ್ತದೆ. ಮಾಸ್ಟರ್ ಕ್ಲಾಸ್ ಮೂಲಕ ಕಾರ್ಯಾಗಾರ ನಡೆಸಲು ನಿರ್ಧರಿಸಲಾಗಿದೆ. ಅಂಗಮಾರಿ ರೋಗದಿಂದ ಆಗಿರುವ ನಷ್ಟ ಹಾಗು ಪರಿಹಾರ ಕ್ರಮಗಳ ಕುರಿತು ವಿಜ್ಞಾನಿಗಳು ವಿವರಿಸಲಿದ್ದಾರೆ ಎಂದರು.

#### ಸವಾಲು ಎದುರಿಸುವುದನ್ನು ಕಲಿಸಬೇಕು

ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ಮಾತನಾಡಿ, ಆಲೂಗಡ್ಡೆ ಬೆಳೆಯಲ್ಲಿ ಬೀಜೋತ್ಪಾದನೆಯಿಂದ ಮಾರಾಟದ ವರೆಗೆ ಅನೇಕ ಸವಾಲು ಎದುರಿಸಬೇಕಾಗುತ್ತದೆ. ಈ ಪ್ರಕ್ರಿಯೆ ಕಷ್ಟಕರವಾದ್ದರಿಂದ ರೈತರು ಹಿಂದೇಟು ಹಾಕುತ್ತಿದ್ದಾರೆ. ಮೆಕ್ಕೆಜೋಳಕ್ಕೆ ಬಿಳಿಸುಳಿ ರೋಗ ತಗುಲಿ ನಷ್ಟ ಅನುಭವಿಸುವಂತಾಗಿದೆ. ರೈತರಿಗೆ ಪರ್ಯಾಯ ಬೆಳೆ ಪರಿಚಯಿಸುವುದು ತುರ್ತು ಅಗತ್ಯವಾಗಿದೆ. ಆದ್ದರಿಂದ ಆಲೂಗಡ್ಡೆ ಬೆಳೆ ಬಗ್ಗೆ ಅರಿವು ಮೂಡಿಸಲು ಮೇಳವನ್ನು ಆಯೋಜಿಸಲಾಗಿದೆಯೆಂದು ಮಾಹಿತಿ ನೀಡಿದರು.

ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷ ಜೆ.ಆರ್.ಕೆಂಚೇಗೌಡ ಮಾತನಾಡಿ, ಮಲೆನಾಡು ಭಾಗದ ಕಾಳು ಮೆಣಸು ಬೆಳೆ ಮೇಲೆ ಶುಂಠಿ ದುಷ್ಪರಿಣಾಮ ಬೀರುತ್ತಿದೆ. ಶುಂಠಿಗೆ ವಿಪರೀತ ಕ್ರಿಮಿನಾಶಕ ಸಿಂಪಡಿಸಲಾಗುತ್ತದೆ. ಕೆರೆ ಕಟ್ಟೆಗಳಿಗೆ ಕಲುಷಿತ ನೀರು ಸೇರಿ ಜಲಚರ ಪ್ರಾಣಿಗಳ ಅಳಿವಿಗೆ ಕಾರಣವಾಗಿದೆ.

ಕನಿಷ್ಠ ಮೂರು ವರ್ಷಗಳ ಮಟ್ಟಿಗೆ ಜಿಲ್ಲೆಯಲ್ಲಿ ಶುಂಠಿ ಬೆಳೆಗೆ ನಿಷೇಧ ಹೇರಬೇಕು. ಶುಂಠಿಯಿಂದ ಕಾಡು ನಾಶವಾಗುತ್ತಿದೆ. ಕೇರಳ ಮೂಲದ ಬೆಳೆ ರೈತರನ್ನು ಸಂಕಷ್ಟಕ್ಕೆ ಸಿಲುಕಿಸುತ್ತಿದೆ ಎಂದರು.

ಆಗ ಮಾತನಾಡಿದ ಜಿಲ್ಲಾಧಿಕಾರಿ ಅವರು, ಶುಂಠಿ ಬೆಳೆಯಿಂದ ಮಣ್ಣಿನ ಫಲವತ್ತತೆ ಹಾಳಾಗುತ್ತಿದ್ದು ರೈತರಿಗೆ ಅರಿವು ಮೂಡಿಸುವ ಕೆಲಸವಾಗಬೇಕು. ತಕ್ಷಣವೇ ಸರ್ವೆ ನಡೆಸಿ ವರದಿ ಸಲ್ಲಿಸಬೇಕೆಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಜಿಲ್ಲಾ ಪಂಚಾಯಿತಿ ಮುಖ್ಯಕಾರ್ಯನಿರ್ವಹಣಾಧಿಕಾರಿ ಬಿ.ಆರ್.ಪೂರ್ಣಿಮಾ, ತೋಟಗಾರಿಕೆ ಇಲಾಖೆ ತಾಲ್ಲೂಕು ಸಹಾಯಕ ಅಧಿಕಾರಿ ಮಂಜೇಶ್ ಮತ್ತಿತರರಿದ್ದರು.

## ಕಿಡ್ನಿ ವೈಫಲ್ಯ: ಆರ್ಥಿಕ ನೆರವಿಗೆ ಮನವಿ




ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಕಿಡ್ನಿ ವೈಫಲ್ಯದಿಂದ ತಮ್ಮ ಮಗನ ಆರೋಗ್ಯದಲ್ಲಿ ಏರುಪೇರಾಗಿದ್ದು, ಶಸ್ತ್ರಚಿಕಿತ್ಸೆಗಾಗಿ ದಾನಿಗಳು ಆರ್ಥಿಕ ನೆರವು ನೀಡಬೇಕೆಂದು ಆಲೂರು ತಾಲ್ಲೂಕು ರಾಯರಕೊಪ್ಪಲು ಗ್ರಾಮದ ಜ್ಯೋತಿ ಮನವಿ ಮಾಡಿದರು.


ಸುದ್ದಿಗೋಷ್ಠಿಯಲ್ಲಿ ಸೋಮವಾರ ಮಾತನಾಡಿ, 27 ವರ್ಷದ ಪುತ್ರ ವಿಶ್ವಾಸ್‌ನ ಆರೋಗ್ಯದಲ್ಲಿ ವ್ಯತ್ಯಯವುಂಟಾಗಿದೆ. ನಮಗೆ ಜಮೀನು ಸೇರಿ ಯಾವ ಆಸ್ತಿಯಿಲ್ಲ. ರಸ್ತೆಬದಿ ಹೋಟೆಲ್ ಇಟ್ಟುಕೊಂಡಿದ್ದೇವೆ. ಕಳೆದ ಒಂದು ತಿಂಗಳಿಂದ ವಿಶ್ವಾಸ್‌ಗೆ ಕೆಮ್ಮು ಕಾಣಿಸಿಕೊಂಡಿತು. ವೈದ್ಯರ ಬಳಿ ತೋರಿಸಿದಾಗ ಒಂದು ಕಿಡ್ನಿ ಹುಟ್ಟಿನಿಂದಲೇ ನಿಷ್ಕ್ರಿಯವಾಗಿದ್ದು, ಮತ್ತೊಂದು ಕಿಡ್ನಿ ನೆರವಿನಿಂದ ಬದುಕುತ್ತಿದ್ದಾನೆ ಎಂದರು.

ನಿತ್ಯ ಡಯಾಲಿಸಿಸ್ ಮಾಡಿಸುತ್ತಿದ್ದು, ಈ ವರೆಗೆ ಎರಡು ಲಕ್ಷ ರೂ. ಖರ್ಚಾಗಿದೆ. ಶಸ್ತ್ರಚಿಕಿತ್ಸೆಗೆ 15 ರಿಂದ 20 ಲಕ್ಷ ರೂ. ಖರ್ಚಾಗುತ್ತದೆಂದು ವೈದ್ಯರು ಹೇಳಿದ್ದಾರೆ. ಅಷ್ಟೊಂದು ಹಣ ಭರಿಸಲು ನಾವು ಶಕ್ತರಾಗಿಲ್ಲ ಹಾಗು ಆಸ್ತಿಯೂ ಇಲ್ಲ. ಆದ್ದರಿಂದ ದಾನಿಗಳು ಆರ್ಥಿಕ ಸಹಾಯ ಮಾಡಬೇಕೆಂದು ಕೋರಿದರು.

ಸಹಾಯ ಮಾಡಲು ಇಚ್ಛಿಸುವವರು ಕರ್ನಾಟಕ ಬ್ಯಾಂಕ್ ಖಾತೆ ಸಂ. 0468252400029301, ಐಎಫ್‌ಎಸ್‌ಸಿ ಸಂ. ಕೆಎಆರ್‌ಬಿ0000468, ಮಗ್ಗೆ ಶಾಖೆ. ಮೊ.ಸಂ. 9100794372 ಇಲ್ಲಿಗೆ ಸಂಪರ್ಕಿಸಬಹುದು ಎಂದರು.

ಸುದ್ದಿಗೋಷ್ಠಿಯಲ್ಲಿ ವಿಶ್ವಾಸ್ ಹಾಗೂ ಶೇಷೇಗೌಡ ಇದ್ದರು.

## ಶಾಲೆಗಳಿಗೆ ಮೂಲ ಸೌಕರ್ಯ ಕಲ್ಪಿಸಲು ಗಮನ ನೀಡಿ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಸಕಲೇಶಪುರ: ವಿದ್ಯಾರ್ಥಿಗಳ ಆರೋಗ್ಯದ ಹಿತದೃಷ್ಟಿಯಿಂದ ಶಾಲೆಗಳಲ್ಲಿ ಶೌಚಾಲಯಗಳ ಸ್ವಚ್ಛತೆಯನ್ನು ಕಾಪಾಡಿಕೊಳ್ಳುವುದು ಶಿಕ್ಷಕರ ಪ್ರಮುಖ ಹೊಣೆಗಾರಿಕೆ ಎಂದು ಶಾಸಕ ಸಿಮೆಂಟ್ ಮಂಜು ಹೇಳಿದರು.

ತಾಲೂಕಿನ ಹಾನಬಾಳು ಹೋಬಳಿ ಕೇಂದ್ರದ ಪದವಿ ಪೂರ್ವ ಕಾಲೇಜು ಹಾಗೂ ಪ್ರಾಥಮಿಕ ಶಾಲೆ (ಕೆಪಿಎಸ್) ಆವರಣದಲ್ಲಿ ಮಹಾತ್ಮ ಗಾಂಧಿ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಹಾಗೂ ಗ್ರಾಮ ಪಂಚಾಯತಿ ಅನುದಾನದಲ್ಲಿ ನಿರ್ಮಿಸಲಾದ ನೂತನ ಶೌಚಾಲಯ ಉದ್ಘಾಟಿಸಿ ಮಾತನಾಡಿ, ವಿದ್ಯಾರ್ಥಿಗಳ ಸಮಗ್ರ ಬೆಳವಣಿಗೆಗೆ ಶಾಲೆಗಳಲ್ಲಿ ಮೂಲಸೌಕರ್ಯಗಳು ಅತ್ಯಂತ ಅವಶ್ಯಕ. ಈ ಹಿನ್ನೆಲೆಯಲ್ಲಿ ಕ್ಷೇತ್ರದಲ್ಲಿರುವ ಶಾಲೆಗಳಲ್ಲಿ ಮೂಲಭೂತ ಸೌಕರ್ಯಗಳ ಅಭಿವೃದ್ಧಿಗೆ ಹೆಚ್ಚಿನ ಗಮನ ನೀಡಲಾಗಿದೆ ಎಂದು ಅವರು ಹೇಳಿದರು.

ನಾಗರಿಕ ಸಮಾಜದಲ್ಲಿ ಗಂಡುಹೆಣ್ಣು ಎಂಬ ಲಿಂಗ ತಾರತಮ್ಯ ಇರಬಾರದು. ಪುರುಷ ಪ್ರಧಾನ ಸಮಾಜದಿಂದ ಮಾತ್ರ ದೇಶದ ಅಭಿವೃದ್ಧಿ ಸಾಧ್ಯವಿಲ್ಲ. ದೇಶದ ಅಭಿವೃದ್ಧಿಯಲ್ಲಿ ಹೆಣ್ಣು ಮಕ್ಕಳ ಪಾತ್ರವೂ ಬಹುಮುಖ್ಯವಾಗಿದೆ ಎಂದು ತಿಳಿಸಿದರು.

ಹಿಂದೆ ಮನೆಯ ಜೀವನಕ್ಕೆ ಸೀಮಿತವಾಗಿದ್ದ ಹೆಣ್ಣು ಮಕ್ಕಳು ಇಂದು ಚಂದ್ರಯಾನ ಯೋಜನೆಯಂತಹ ಮಹತ್ವದ ವಿಜ್ಞಾನ ಕ್ಷೇತ್ರಗಳಲ್ಲಿ ಸಾಧನೆ ಮಾಡುತ್ತಿದ್ದಾರೆ. ಆದ್ದರಿಂದ ಹೆಣ್ಣು ಮಕ್ಕಳು ತಮ್ಮಲ್ಲಿರುವ ಕೀಳರಿಮೆಯನ್ನು ತೊರೆದು, ತಾವು ಯಾವುದೇ ಕೆಲಸ ಮಾಡಬಲ್ಲೆವು ಎಂಬ ದೃಢ ನಿಶ್ಚಯ ಹಾಗೂ ಆತ್ಮವಿಶ್ವಾಸವನ್ನು ಬೆಳೆಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ನರೇಗಾ ಯೋಜನೆಯಡಿ ಶಾಲೆಗಳ ಸುತ್ತುಗೋಡೆ, ಆಟದ ಮೈದಾನ, ಶೌಚಾಲಯ ಸೇರಿದಂತೆ ವಿವಿಧ ಮೂಲಸೌಕರ್ಯ ಕಾಮಗಾರಿಗಳನ್ನು ಕೈಗೊಳ್ಳಬಹುದು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಹಾನಬಾಳು ಗ್ರಾಮ ಪಂಚಾಯಿತಿ ಅಧ್ಯಕ್ಷ ಕೆ.ಆರ್. ಸಂತೋಷ್, ಉಪಾಧ್ಯಕ್ಷೆ ಶೈಲಾ ರುದ್ರೇಶ್, ಗ್ರಾಮ ಪಂಚಾಯಿತಿ ಸದಸ್ಯರಾದ ಮೋಹನ್ ಕುಮಾರ್ ಅಚ್ಚರಡಿ, ಯೋಗರಾಜು, ಸುರೇಶ್, ಎಸ್‌ಡಿಎಂಸಿ ಅಧ್ಯಕ್ಷ ಅಣ್ಣು, ಹಳೆ ವಿದ್ಯಾರ್ಥಿ ಸಂಘದ ಅಧ್ಯಕ್ಷ ಚಂದ್ರಶೇಖರ್, ಗೌರವಾಧ್ಯಕ್ಷ ಭಾಸ್ಕರ್ ಹಾನಬಾಳು, ಮುಖಂಡರಾದ ಕ್ಯಾಮನಹಳ್ಳಿ ರಾಜಕುಮಾರ್, ಸೋಮಶೇಖರ್, ಅವರೆಕಾಡು ಪೃಥ್ವಿ, ಸುಬ್ಬಣ್ಣ ಮತ್ತಿತರರಿದ್ದರು.

## ಕೌಟುಂಬಿಕ ಕಲಹ ಹೆಂಡತಿ ಹತ್ಯೆಗೈದ ಪತಿ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಆಲೂರು ತಾಲ್ಲೂಕಿನ ಯಡೂರು ಗ್ರಾಮದಲ್ಲಿ ಪತಿ ತನ್ನ ಹೆಂಡತಿಯನ್ನು ಕೆನ್ನೆಗೆ ಹೊಡೆದು ಕೊಲೆಗೈದಿದ್ದಾನೆ.

ಸಾಕ್ಷ್ಯ ನಾಶಕ್ಕಾಗಿ ಶವವನ್ನು ಯಗಚಿ ನದಿಗೆ ಎಸೆದು ಪರಾರಿಯಾಗಿದ್ದಾನೆ.ಯಡೂರು ನಿವಾಸಿ ರಾಧಾ (40) ಮೃತ ದುರ್ದೈವಿ. ಪತಿ ಕುಮಾರ್ ಹತ್ಯೆಗೈದ ಆರೋಪಿ. 22 ವರ್ಷಗಳ ಹಿಂದೆ ವಿವಾಹವಾಗಿದ್ದ ದಂಪತಿ ಆರಂಭದಲ್ಲಿ ಅನ್ಯೋನ್ಯವಾಗಿದ್ದರು. ಕಳೆದ ಎಂಟು ವರ್ಷಗಳಿಂದ ಇಬ್ಬರೂ ಪ್ರತ್ಯೇಕವಾಗಿದ್ದರು. ರಾಧಾ ಹಾಸನದ ಆಡುವಳ್ಳಿಯಲ್ಲಿ ಬಾಡಿಗೆ ಮನೆಯಲ್ಲಿದ್ದು, ಕೂಲಿ ಕೆಲಸ ಮಾಡಿಕೊಂಡಿದ್ದರು. ಕುಮಾರ್ ಯಡೂರಿನಲ್ಲಿ ತನ್ನ ತಾಯಿ ಜೊತೆಗೆ ವಾಸವಿದ್ದ.

ಕಳೆದ ಶನಿವಾರ ರಾತ್ರಿ 10 ಗಂಟೆಗೆ ಯಡೂರಿಗೆ ಬಂದಿದ್ದ ಪತ್ನಿ ಜೊತೆಗೆ ಜಗಳ ಶುರು ಮಾಡಿದ ಕುಮಾರ್ ಅವಾಚ್ಯ ಶಬ್ದಗಳಿಂದ ನಿಂದಿಸುತ್ತಾ ಕುಡಿದ ಅಮಲಿನಲ್ಲಿ ಕೆನ್ನೆಗೆ ಜೋರಾಗಿ ಹೊಡೆದಿದ್ದ. ಬಲವಾದ ಹೊಡೆತಕ್ಕೆ ಪ್ರಜ್ಞೆ ತಪ್ಪಿ ಬಿದ್ದಿದ್ದ ರಾಧಾ ಕೆಲ ಸಮಯದ ಬಳಿಕ ಮೃತಪಟ್ಟಿದ್ದರು. ಕೊಲೆ ಮಾಡಿದ್ದು ತಾನೇ ಎಂಬುದು ಗೊತ್ತಾದರೆ ಜೈಲು ಸೇರಬೇಕಾಗುತ್ತದೆಂದು ಸಾಕ್ಷ್ಯ ನಾಶಕ್ಕಾಗಿ ಶವವನ್ನು ಬೆಡ್‌ಶೀಟ್‌ನಲ್ಲಿ ಕಟ್ಟಿ ಬೈಕ್‌ನಲ್ಲಿ ಯಗಚಿ ನದಿಗೆ ತಂದು ಎಸೆದಿದ್ದ. ಆಲೂರು ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

### ಜ. 24–25ರಂದು ವಾಲಿಬಾಲ್ ಪಂದ್ಯಾವಳಿ

ಅರಸೀಕೆರೆ: ತಾಲ್ಲೂಕಿನ ಅರಕೆರೆ ಗ್ರಾಮದಲ್ಲಿ ಕರಿಯಮ್ಮ ದೇವಿ ಜಾತ್ರಾ ಮಹೋತ್ಸವ ಅಂಗವಾಗಿ ಜ. 24 ಹಾಗು 25 ರಂದು ಕರಿಯಮ್ಮ ದೇವಿ ಕಪ್ ವಾಲಿಬಾಲ್ ಪಂದ್ಯಾವಳಿ ಆಯೋಜಿಸಲಾಗಿದೆ. ಪ್ರಥಮ ಬಹುಮಾನ 30 ಸಾವಿರ ರೂ., ದ್ವಿತೀಯ 20 ಸಾವಿರ ರೂ., ತೃತೀಯ 15 ಸಾವಿರ ರೂ., ನಾಲ್ಕನೇ ಬಹುಮಾನ 10 ಸಾವಿರ ರೂ. ಮತ್ತು ಐದನೇ ಬಹುಮಾನ 8 ಸಾವಿರ ರೂ. ನೀಡಲಾಗುವುದು. ಪ್ರವೇಶ ಶುಲ್ಕ 999 ರೂ. ನಿಗದಿಪಡಿಸಿದ್ದು ಆಸಕ್ತ ಕ್ರೀಡಾಪಟುಗಳು ಮೊ.ನಂ. 9741506723 ಇಲ್ಲಿಗೆ ಕರೆ ಮಾಡಿ ಹೆಸರು ನೋಂದಾಯಿಸಬಹುದು. ಪಂದ್ಯಾವಳಿ ಉದ್ಘಾಟನಾ ಸಮಾರಂಭದಲ್ಲಿ ಶಾಸಕ ಹೆಚ್.ಕೆ.ಸುರೇಶ್, ಮಾಜಿ ಸಚಿವ ಬಿ.ಶಿವರಾಂ, ಮಾಜಿ ಶಾಸಕ ಕೆ.ಎಸ್.ಲಿಂಗೇಶ್, ವಿಶೇಷ ನಿವೃತ್ತ ಜಿಲ್ಲಾಧಿಕಾರಿ ಕವಿತಾ ಬಿ.ನಾಗರಾಜ್ ಮತ್ತಿತರರು ಪಾಲ್ಗೊಳ್ಳಲಿದ್ದಾರೆ.

## ಅಪ್ಪ-ಅಮ್ಮನ ಕಣ್ಣಲ್ಲಿ ನೀರು ಹಾಕಿಸಿದವರಿಗೆ ಶಾಪ ತಟ್ಟುತ್ತೆ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಸಕಲೇಶಪುರ: ವಿನಾಕಾರಣ ನಮ್ಮ ಅಪ್ಪ-ಅಮ್ಮನ ಕಣ್ಣಲ್ಲಿ ನೀರು ಹಾಕಿಸಿದವರಿಗೆ ಶಾಪ ತಟ್ಟದೆ ಬಿಡುವುದಿಲ್ಲ ಎಂದು ಮಾಜಿ ಸಚಿವ ಹೆಚ್.ಡಿ. ರೇವಣ್ಣ ಆಕ್ರೋಶ ವ್ಯಕ್ತಪಡಿಸಿದರು.

ತಾಲೂಕು ಜೆಡಿಎಸ್‌ನಿಂದ ಸೋಮವಾರ ಪಟ್ಟಣದಲ್ಲಿ ಆಯೋಜಿಸಿದ್ದ ಕಾರ್ಯಕರ್ತರ ಸಭೆಯಲ್ಲಿ ಮಾತನಾಡಿ, ನಮ್ಮ ಕುಟುಂಬದ ವಿರುದ್ಧ ಇಲ್ಲಸಲ್ಲದ ಆರೋಪ ಮಾಡಿ ಹಿರಿಯರು ಮನಕುಗ್ಗುವಂತೆ ಮಾಡಿದವರಿಗೆ ಶೀಘ್ರದಲ್ಲಿ ಉತ್ತರ ದೊರಕಲಿದೆ. ಪಕ್ಷ ಸಂಘಟನೆಯನ್ನು ಜೆಡಿಎಸ್‌ಗೆ ಯಾರು ಹೇಳಿಕೊಡಬೇಕಿಲ್ಲ. ಜೆಡಿಎಸ್ ಮುಗಿದೆ ಹೋಗಿದೆ ಎಂಬ ಭಾವನೆ ವಿರೋಧಿಗಳಲ್ಲಿ ನೆಲೆಸಿದೆ. ಆದರೆ, ಶೂನ್ಯದಿಂದ ಸಂಪಾದನೆ ಮಾಡುವುದು ನಮಗೆ ತಿಳಿದಿದೆ. ಸೋಲು ಗೆಲವು ನಮ್ಮ ಪಕ್ಷಕ್ಕೆ ಸಹಜ. 93ನೇ ವಯಸ್ಸಿನಲ್ಲಿರುವ ದೇವೆಗೌಡರಿರಗೆ ಜಿಲ್ಲೆಯ ಆಗು ಹೋಗುಗಳ ಬಗ್ಗೆ ಅರಿವಿದೆ. ನಮ್ಮ ಪಕ್ಷ ಜಿಲ್ಲೆಯ ಅಭಿವೃದ್ಧಿಗೆ ಪ್ರಾಮಾಣಿಕವಾಗಿ ಶ್ರಮಿಸಿದೆ. ಮುಂದಿನ ದಿನಗಳಲ್ಲಿ ಗ್ರಾಮ ಗ್ರಾಮಗಳಲ್ಲಿ ಕಾರ್ಯಕರ್ತರು ಕಾಂಗ್ರೆಸ್ ಸರ್ಕಾರದ ದುರಾಡಳಿತದ ಬಗ್ಗೆ ತಿಳಿಸುವ ಕೆಲಸ ಮಾಡಬೇಕಿದೆ.

ಎಚ್.ಡಿ ಕುಮಾರಸ್ವಾಮಿ ಮುಖ್ಯಮಂತ್ರಿಯಾಗಿದ್ದ ವೇಳೆ ರೈತರ ಸಾಲ ಮನ್ನಾ ಮಾಡಿದ್ದಾರೆ. ವಿಶೇಷವಾಗಿ ಜಿಲ್ಲೆಯಲ್ಲಿ ಹತ್ತಾರು ಮಹತ್ಕಾರ್ಯಗಳನ್ನು ಮಾಡಿದ್ದಾರೆ. ಇಂಧನ ಮಂತ್ರಿಯಾಗಿ ತಾಲೂಕಿನ ಅಭಿವೃದ್ಧಿಗೆ ನಾನು ನೀಡಿರುವ ಕೊಡುಗೆ ಎಲ್ಲರಿಗೂ ತಿಳಿದಿದೆ ಎಂದರು. ಮಾಜಿ ಸಚಿವ ಎಚ್.ಕೆ. ಕುಮಾರಸ್ವಾಮಿ ಮಾತನಾಡಿ, ಜ. 24ರ ಹಾಸನ ಕಾರ್ಯಕ್ರಮದ ಅಂಗವಾಗಿ ಇದು ಪೂರ್ವಭಾವಿ ಸಭೆಯಾಗಿದೆ. ಬೇಕು ಅಂತಲೇ ಕಾಂಗ್ರೆಸ್‌ನವರು ಹಾಸನದಲ್ಲಿ ಸಮಾವೇಶ ಮಾಡಿದ್ದಾರೆ. ಎರಡೂವರೆ ವರ್ಷದಲ್ಲಿ ಕಾಂಗ್ರೆಸ್ ಏನು ಅಭಿವೃದ್ಧಿ ಮಾಡಿದೆ ಎಂಬುದನ್ನು ಮೊದಲು ಹೇಳಲಿ ಎಂದು ಸವಾಲೆಸೆದರು. ಅಧಿಕಾರಿಗಳು ಜನರ ಮಾತು ಕೇಳುತ್ತಿಲ್ಲ. ನಮ್ಮ ಕ್ಷೇತ್ರದಲ್ಲಿ ಕಾಂಗ್ರೆಸ್‌ಗೆ ಮೂರನೇ ಸ್ಥಾನ, ಮೊದಲ ಎರಡು ಸ್ಥಾನದಲ್ಲಿ ಜೆಡಿಎಸ್–ಬಿಜೆಪಿ ಇದೆ. ದೇಶ ಹಾಗೂ ರಾಜ್ಯದಲ್ಲಿ ನಿಜವಾದ ಅಹಿಂದ ನಾಯಕರು ದೇವೇಗೌಡರು. ಶಿಕ್ಷಣ, ಆರೋಗ್ಯ, ಉದ್ಯೋಗದಲ್ಲಿ ಕಾಂಗ್ರೆಸ್ ಸಾಧನೆ ಶೂನ್ಯ. ತಾಲೂಕಿನಲ್ಲಿ 145 ಬೂತ್‌ಗಳಿದ್ದು 278 ಗ್ರಾಮಗಳಿವೆ. ಪ್ರತಿ ಗ್ರಾಮದಿಂದ ಕಾರ್ಯಕರ್ತರನ್ನು ಸಮಾವೇಶಕ್ಕೆ ಹೊರಡಿಸೋಣ ಎಂದರು.

ಜೆಡಿಎಸ್ ತಾಲೂಕು ಅಧ್ಯಕ್ಷ ಕೆ.ಎಲ್. ಸೋಮಶೇಖರ್, ಜಿ.ಪಂ. ಮಾಜಿ ಸದಸ್ಯರಾದ ಸುಪ್ರದೀಪ್ತ ಯಜಮಾನ್, ಚಂಚಲಾ ಕುಮಾರಸ್ವಾಮಿ, ಉಜ್ಮಾ ರುಜ್ವಿ, ಪಕ್ಷದ ಮುಖಂಡರಾದ ಸಚ್ಚಿನ್ ಪ್ರಸಾದ್ ಮತ್ತಿತರರಿದ್ದರು.

## ರಾಷ್ಟ್ರೀಯ ಯುವ ಸಪ್ತಾಹ ಅಂಗವಾಗಿ ಮೆರವಣಿಗೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್



ಹಾಸನ: ನಗರದ ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಆಯುರ್ವೇದ ಮಹಾವಿದ್ಯಾಲಯ ಮತ್ತು ಆಸ್ಪತ್ರೆ ಆವರಣದಲ್ಲಿ ಸ್ವಾಮಿ ವಿವೇಕಾನಂದರ 163ನೇ ಜನ್ಮದಿನದ ಪ್ರಯುಕ್ತ ರಾಷ್ಟ್ರೀಯ ಯುವ ಸಪ್ತಾಹದ ಅಂಗವಾಗಿ ಮೆರವಣಿಗೆ ಹಮ್ಮಿಕೊಳ್ಳಲಾಗಿತ್ತು.

ಎಸ್‌ಡಿಎಂ ನಿರ್ದೇಶಕ ಡಾ. ಪ್ರಸನ್ನ ನರಸಿಂಹ ರಾವ್ ಅವರು ಡೋಲು ಬಾರಿಸಿ ಹಸಿರು ಬಾವುಟ ಪ್ರದರ್ಶಿಸುವ ಮೂಲಕ ಅಧಿಕೃತ ಚಾಲನೆ ನೀಡಿದರು.

ನಂತರ ಮಾತನಾಡಿದ ಅವರು, ಜಿಲ್ಲಾಡಳಿತದ ಸಹಕಾರದೊಂದಿಗೆ ವಿವೇಕಾನಂದ ಜಯಂತಿ ಮತ್ತು ರಾಷ್ಟ್ರೀಯ ಯುವ ಸಪ್ತಾಹ ಆಚರಿಸಲಾಗುತ್ತಿದೆ. ಯುವಜನತೆಯ ಭಾಗವಹಿಸುವಿಕೆಯಿಂದ ಆಕರ್ಷಕ ಮೆರವಣಿಗೆ ನಡೆಯುತ್ತಿದ್ದು, ಇದು ಯುವಶಕ್ತಿಯ ಪ್ರತೀಕವಾಗಿದೆ ಎಂದರು.

ಸ್ವಾಮಿ ವಿವೇಕಾನಂದರ ಏಳಿ ಎದ್ದೇಳಿ, ಗುರಿ ಮುಟ್ಟುವ ತನಕ ನಿಲ್ಲದಿರಿ ಎಂಬ ಸಂದೇಶ ಇಂದಿಗೂ ಜೀವಂತವಾಗಿದೆ. ಪ್ರತಿಯೊಬ್ಬರೂ ತಮ್ಮ ಜೀವನದಲ್ಲಿ ಗುರಿ ಹೊಂದಬೇಕು. ಪ್ರತಿದಿನ ನನ್ನ ಕರ್ತವ್ಯವೇನು, ಗುರಿ ಸಾಧನೆಗೆ ನಾನು ಎಷ್ಟು ಶ್ರಮಿಸುತ್ತಿದ್ದೇನೆ ಎಂಬುದನ್ನು ಆತ್ಮಾವಲೋಕನ ಮಾಡಿಕೊಳ್ಳುವುದು ಬಹಳ ಮುಖ್ಯ. ಆತ್ಮ ನಿರ್ಭರ ಭಾರತ ಎಂಬುದು ವಿವೇಕಾನಂದರ ಕನಸಾಗಿದ್ದು, ಯುವ ಜನತೆಯಲ್ಲಿ ರಾಷ್ಟ್ರನಿರ್ಮಾಣ ಮಾಡುವ ಅಪಾರ ಶಕ್ತಿ ಇದೆ ಎಂಬುದನ್ನು ಅವರು ಜಗತ್ತಿಗೆ ತೋರಿಸಿಕೊಟ್ಟಿದ್ದಾರೆ ಎಂದು ಹೇಳಿದರು. ಸ್ವಾಮಿ ವಿವೇಕಾನಂದರು ಶಾಂತಿದೂತರಾಗಿದ್ದು, ಪ್ರಪಂಚಕ್ಕೆ ಭಾರತೀಯ ಸಂಸ್ಕೃತಿ ಹಾಗೂ ಧರ್ಮದ ಮಹತ್ವವನ್ನು ಸ್ಪಷ್ಟವಾಗಿ ತಿಳಿಸಿದ ಮಹಾನ್ ಚಿಂತಕ ಎಂದು ಬಣ್ಣಿಸಿದರು. ಕೊಲೊಂಬೊ ಟು ಅಲ್ಮೋರಾ ಸೇರಿ ಅವರು ಬರೆದ ಪುಸ್ತಕಗಳಲ್ಲಿ ನಾಯಕತ್ವ, ಗುರಿ ಸಾಧನೆ ಹಾಗೂ ಜೀವನ ಮೌಲ್ಯಗಳ ಕುರಿತು ವಿಸ್ತಾರವಾಗಿ ವಿವರಿಸಿದ್ದಾರೆ. ಆದ್ದರಿಂದ ಯುವಜನತೆ ಅವರ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ಈ ಟಿವಿ ಮುಖ್ಯಸ್ಥ ಸುಬ್ಬಯ್ಯ ನಾಯ್ಡು, ಜಿಪಂ ಉಪ ಕಾರ್ಯದರ್ಶಿ ಬಾಬು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕ ಡಾ. ಜಿ.ಡಿ. ಆನಂದಮೂರ್ತಿ, ಎಸ್‌ಡಿಎಂ ಆಯುರ್ವೇದ ಕಾಲೇಜಿನ ಡಾ.ಯು. ಶೈಲಜಾ, ಡಾ. ಗುರುಬಸವರಾಜು ಯಲಗಚ್ಚಿನ, ಕಲಾವಿದ ಬಿ.ಟಿ. ಮಾನವ ಮತ್ತಿತರರಿದ್ದರು.

## ಬಾಗೂರು ಸರ್ಕಾರಿ ಪ್ರೌಢ ಶಾಲೆ ವಿದ್ಯಾರ್ಥಿಗಳ ಸ್ನೇಹ ಸಮ್ಮಿಲನ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್



ಚನ್ನರಾಯಪಟ್ಟಣ: ತಾಲೂಕಿನ ಬಾಗೂರು ಸರ್ಕಾರಿ ಪ್ರೌಢಶಾಲೆ ವತಿಯಿಂದ 2000–01ನೇ ಸಾಲಿನ ಎಸ್‌ಎಸ್‌ಎಲ್‌ಸಿ ಹಳೆಯ ವಿದ್ಯಾರ್ಥಿಗಳಿಂದ ಗುರುವಂದನೆ ಹಾಗೂ ಸ್ನೇಹ ಸಮ್ಮಿಲನ ಆಯೋಜಿಸಲಾಗಿತ್ತು.

2000–01ನೇ ಸಾಲಿನಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಹಾಗೂ ಹಾಲಿ ಶಿಕ್ಷಣ ಇಲಾಖೆಯ ಡಿಎಸ್‌ಇಆರ್‌ಟಿ ಸಹಾಯಕ ನಿರ್ದೇಶಕಿ ಟಿ.ಎನ್.ಭಾನುಮತಿ ಮಾತನಾಡಿ, ಗುರು–ಶಿಷ್ಯರ ಸಂಬಂಧ ಅಂತ್ಯಗೊಂಡು 25 ವರ್ಷ ಕಳೆದಿವೆ. ಆದರೂ ತನ್ನ ನೆಚ್ಚಿನ ಶಿಕ್ಷಕರಿಗೆ ಗುರುವಂದನಾ ಕಾರ್ಯಕ್ರಮದ ಮೂಲಕ ಗೌರವ ಸಲ್ಲಿಸುತ್ತಿರುವುದು. ವಿದ್ಯಾರ್ಥಿಗಳಿಗೆ ಶಿಕ್ಷಕರ ಮೇಲಿರುವ ಗೌರವ ಪ್ರೀತಿ ತೋರುತ್ತದೆಂದರು.

ಗುರು–ಶಿಷ್ಯರ ಸಂಬಂಧ ಎಂದಿಗೂ ಕೊನೆಗೊಳ್ಳುವ ಬಾಂಧವ್ಯವಲ್ಲ, ಅದೊಂದು ಪವಿತ್ರವಾದ ಸಂಬಂಧವಾಗಿದೆ. ಆಧುನಿಕ ಕಾಲಘಟ್ಟದಲ್ಲಿ ಆಧುನಿಕತೆ ಬೆಳೆದಂತೆ ಎಲ್ಲವೂ ಬದಲಾಗುತ್ತಿದೆ. ಆದರೆ ಇವತ್ತಿನ ಇಂತಹ ಪರಿಸ್ಥಿತಿಯಲ್ಲಿ ಕಳೆದ 25 ವರ್ಷಗಳ ನಂತರ ಶಿಕ್ಷಕರು ಹಾಗೂ ಹಳೆ ವಿದ್ಯಾರ್ಥಿಗಳನ್ನು ಒಂದೆಡೆ ಸೇರಿಸುವ ಮೂಲಕ ಗುರುವಂದನ ಹಾಗೂ ಸ್ನೇಹ ಸಮ್ಮಿಲನ ಕಾರ್ಯಕ್ರಮ ಆಯೋಜಿಸುವುದು ಖುಷಿ ತಂದಿದೆ ಎಂದರು.

ಆ ವರ್ಷ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಶೇ. 75 ರಷ್ಟು ಫಲಿತಾಂಶ ಬಂದಿತ್ತು. ಇಂದಿಗೂ ನಾನು ಫಲಿತಾಂಶವನ್ನು ಮರೆತಿಲ್ಲ. ಶಿಕ್ಷಣಕ್ಕೆ ಹೆಚ್ಚು ಮಹತ್ವ ನೀಡಿದರೆ ಮಕ್ಕಳ ಭವಿಷ್ಯ ರೂಪಗೊಳ್ಳಲು ಸಾಧ್ಯ ಎಂದರು.

ನಿವೃತ್ತ ಶಿಕ್ಷಕ ಎಂ.ಸಿ. ಹಲಗೇಗೌಡ ಮಾತನಾಡಿ, ಶಾಲೆಯ 2000– 01ನೇ ಸಾಲಿನ ಹಳೆಯ ವಿದ್ಯಾರ್ಥಿಗಳು ಕಾರ್ಯಕ್ರಮ ಆಯೋಜಿಸಿದ್ದಾರೆ. ಅವತ್ತಿನ ಕಾಲದಲ್ಲಿ ಶಿಕ್ಷಣಕ್ಕೆ ಹೆಚ್ಚಿನ ಪ್ರಾಮುಖ್ಯತೆ ಇತ್ತು. ಗ್ರಾಮೀಣ ಪ್ರದೇಶದಲ್ಲಿ ಬಡತನವಿದ್ದರೂ ತಮ್ಮ ಮಕ್ಕಳಿಗೆ ಉತ್ತಮ ಶಿಕ್ಷಣ ಸಿಗಲೆಂದು ಜನರು ಕೂಲಿ ಮಾಡಿ ಓದಿಸುತ್ತಿದ್ದರು. ಹಳೆಯ ನೆನಪುಗಳು ಎಂದು ಮಾಸುವುದಿಲ್ಲ ಎಂದರು.

ವಿಭಿನ್ನ ಕಾರ್ಯಕ್ರಮ ಆಯೋಜನೆ: ಗುರುವಂದನೆ ಹಾಗೂ ಸ್ನೇಹ ಸಮ್ಮಿಲನ ಎಂಬ ಶೀರ್ಷಿಕೆಯಲ್ಲಿ ಗುರು ಶಿಷ್ಯರ ಸಮಾಗಮ ಕಾರ್ಯಕ್ರಮದಲ್ಲಿ ಪ್ರತಿ ಶಿಕ್ಷಕರನ್ನು ಮಾತನಾಡಿಸಿ ಅವರ ಸಲಹೆ ಮಾರ್ಗದರ್ಶನದ ಜೊತೆಗೆ ನಿವೃತ್ತಿಯ ಜೀವನದ ನಂತರ ಅವರು ಯಾವ ರೀತಿ ಜೀವನ ನಡೆಸುತ್ತಿದ್ದಾರೆ. ಜೊತೆಗೆ ಮುಂಬರುವ ದಿನಗಳಲ್ಲಿ ನಾವು ಯಾವ ರೀತಿ ನಡೆದುಕೊಳ್ಳಬೇಕು ಎನ್ನುವ ಕುರಿತು ಹಳೆಯ ವಿದ್ಯಾರ್ಥಿಗಳು ತಮ್ಮ ನೆಚ್ಚಿನ ಶಿಕ್ಷಕರಿಂದ ಸಲಹೆ ಸೂಚನೆಗಳನ್ನು ಪಡೆದರು. ಶಿಕ್ಷಕರಾದ ಟಿ.ಎನ್. ಭಾನುಮತಿ, ಬಿ.ಬಿ. ಬಸವರಾಜೇಗೌಡ, ಎಂ.ಸಿ. ಹಲಗೇಗೌಡ, ಸೂರ್ಯನಾರಾಯಣ, ಪಿ.ರಾಮಸ್ವಾಮಿ, ರಂಗಸ್ವಾಮಿ, ಅನಿತಾ ಕುಮಾರಿ, ಜೆ.ಹಿರಿಯಣ್ಣ, ಹೆಚ್. ಹೆಚ್. ಸತೀಶ್, ಮಂಜುನಾಥ್, ಜಿ.ವಿ.ವಿಜಯ ಕುಮಾರಿ ಅವರನ್ನು ಸನ್ಮಾನಿಸಲಾಯಿತು.

## ಪ್ರತ್ಯೇಕ ಅಪಘಾತದಲ್ಲಿ ಮೂವರು ಸಾವು

ಹಾಸನ: ಅರಸೀಕೆರೆ ತಾಲೂಕಿನ ಗಂಡಸಿ ಹಾಗೂ ಹಾಸನ ಸಂಚಾರ ಠಾಣೆ ವ್ಯಾಪ್ತಿಯಲ್ಲಿ ಸಂಭವಿಸಿದ ಪ್ರತ್ಯೇಕ ರಸ್ತೆ ಅಪಘಾತದಲ್ಲಿ ಮೂವರು ಮೃತಪಟ್ಟಿದ್ದಾರೆ.

ಥಾರ್ ಜೀಪ್ ಡಿಕ್ಕಿಯಾಗಿ ಬೈಕ್ ಸವಾರರಿಬ್ಬರು ಮೃತಪಟ್ಟು ಮತ್ತೊಬ್ಬ ಗಂಭೀರ ಗಾಯಗೊಂಡಿರುವ ಘಟನೆ ದೊಡ್ಡಮಂಡಿಗನಹಳ್ಳಿಯ ಕಿಯಾ ಶೋ ರೂಂ ಸಮೀಪ ನಡೆದಿದೆ. ನಗರದ ಹೇಮಂತ್‌ಕುಮಾರ್ (24) ಹಾಗೂ ಫಯಾಜ್ ಪಾಷ (24) ಮೃತರು. ಮಹಮ್ಮದ್ ಫೈರೋಜ್ ಪಾಷಾ ಎಂಬುವವರಿಗೆ ಗಂಭೀರ ಗಾಯಗಳಾಗಿದ್ದು ಹಿಮ್ಸ್‌ನಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಹೇಮಂತ್‌ಕುಮಾರ್ ಅವರ ಬೈಕ್‌ನಲ್ಲಿ ಮೂವರು ಶನಿವಾರ ರಾತ್ರಿ 10 ಗಂಟೆ ಸಮಯದಲ್ಲಿ ಬರುತ್ತಿದ್ದಾಗ ಆಲೂರು ಕಡೆಯಿಂದ ಬಂದ ಥಾರ್ ಜೀಪ್ ಡಿಕ್ಕಿಯಾಗಿದೆ. ಗಂಭೀರ ಗಾಯಗೊಂಡಿದ್ದ ಮೂವರನ್ನು ಆಸ್ಪತ್ರೆಗೆ ದಾಖಲಿಸಲಾಗಿತ್ತು. ತಲೆ ಮತ್ತು ಎದೆ ಭಾಗಕ್ಕೆ ಗಂಭೀರ ಗಾಯಗಳಾಗಿದ್ದರಿಂದ ಇಬ್ಬರು ಅಸುನೀಗಿದ್ದಾರೆ. ಸಂಚಾರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಮತ್ತೊಂದು ಪ್ರಕರಣದಲ್ಲಿ ಬೈಕ್‌ಗಳ ಮುಖಾ ಮುಖಿ ಡಿಕ್ಕಿಯಲ್ಲಿ ವೃದ್ಧ ಮೃತಪಟ್ಟಿರುವ ಘಟನೆ ಅರಸೀಕೆರೆ ತಾಲ್ಲೂಕು ಮೈಸೂರು–ಅರಸೀಕೆರೆ ರಸ್ತೆಯ ಖಾಸಗಿ ಕಾಲೇಜು ಸಮೀಪ ನಡೆದಿದೆ. ದೊಡ್ಡಯರಗನಾಳು ಗ್ರಾಮದ ನಾಗೇಗೌಡ (62) ಮೃತರು. ಭಾನುವಾರ ಮಧ್ಯಾಹ್ನ ನಾಗೇಗೌಡ ಅವರು ಅಕ್ಕಿ ಮಿಲ್ ಮಾಡಿಸಿಕೊಂಡು ಗಂಡಸಿ ಹ್ಯಾಂಡ್‌ಪೋಸ್ಟ್‌ನಿಂದ ಮನೆಗೆ ಬರುತ್ತಿದ್ದಾಗ ಎದುರುಗಡೆಯಿಂದ ವೇಗವಾಗಿ ಬಂದ ಬೈಕ್ ಡಿಕ್ಕಿಯಾಗಿದೆ. ಅಪಘಾತದಲ್ಲಿ ಗಂಭೀರ ಗಾಯಗೊಂಡಿದ್ದ ವೃದ್ಧನನ್ನು ಆಸ್ಪತ್ರೆಗೆ ಕರೆತರುತ್ತಿದ್ದಾಗ ಮಾರ್ಗಮಧ್ಯೆ ಮೃತಪಟ್ಟಿದ್ದಾರೆ. ಗಂಡಸಿ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಗುಡ್ ಸಿಟಿಜನ್ ಕಾಲೇಜಿನಲ್ಲಿ ವಿವೇಕಾನಂದ ಜಯಂತಿ




ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಮನುಷ್ಯ ಹಣದ ಶ್ರೀಮಂತಿಕೆಗಿಂತ ಗುಣಕ್ಕೆ ಪ್ರಾಧಾನ್ಯತೆ ನೀಡಬೇಕೆಂದು ಲೇಖಕಿ ಬಿ.ವೇದಾವತಿ ಹೇಳಿದರು.

ನಗರದ ಗುಡ್ ಸಿಟಿಜನ್ ಕಾಲೇಜಿನಲ್ಲಿ ಸೋಮವಾರ ಆಯೋಜಿಸಿದ್ದ ಸ್ವಾಮಿ ವಿವೇಕಾನಂದ ಜಯಂತಿ ಉದ್ಘಾಟಿಸಿ ಮಾತನಾಡಿ, ಸ್ವಾಮಿ ವಿವೇಕಾನಂದರು ಹಾಕಿಕೊಟ್ಟ ಮಾರ್ಗದಲ್ಲಿ ಸಾಗಿದರೆ ಸುಂದರ ಬದುಕು ಕಟ್ಟಿಕೊಳ್ಳಬಹುದು. ಭಾರತ ಕಂಡ ಶ್ರೇಷ್ಠ ದಾರ್ಶನಿಕರಲ್ಲಿ ವಿವೇಕಾನಂದ ಮುಖ್ಯ ಎಂದರು.

# ಬೆಂಬಲ ಬೆಲೆಯಡಿ ಮೆಕ್ಕೆಜೋಳ ಖರೀದಿ ಪ್ರಕ್ರಿಯೆ ಆರಂಭ

## ಬೆಳೆ ವ್ಯತ್ಯಾಸ ಪಾವತಿ ಯೋಜನೆ I ಕ್ವಿಂಟಾಲ್‌ಗೆ 250 ರೂ. ರೈತರಿಗೆ ಲಾಭ

**ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್**

ಹಾಸನ: ಬೆಂಬಲ ಬೆಲೆಯಡಿ ಹೆಚ್ಚುವರಿ ಮೆಕ್ಕೆಜೋಳ ಖರೀದಿಸಬೇಕೆಂಬ ರೈತರ ಕೂಗಿಗೆ ಸ್ಪಂದಿಸಿರುವ ರಾಜ್ಯ ಸರ್ಕಾರ ಬೆಲೆ ವ್ಯತ್ಯಾಸ ಪಾವತಿ ಯೋಜನೆಯಡಿ ಖರೀದಿಗೆ ಮುಂದಾಗಿದ್ದು, ಜಿಲ್ಲಾದ್ಯಂತ ನೋಂದಣಿ ಪ್ರಕ್ರಿಯೆ ಪ್ರಾರಂಭವಾಗಲಿದೆ.

ಜಿಲ್ಲೆಯು 2,29,974 ಹೆಕ್ಟೇರ್ ಕೃಷಿ ಭೂಮಿ ಹೊಂದಿದೆ. 2025-26ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಜಿಲ್ಲೆಯಲ್ಲಿ 1,01,065 ಹೆಕ್ಟೇರ್ ಪ್ರದೇಶದಲ್ಲಿ ಮೆಕ್ಕೆಜೋಳ ಬಿತ್ತನೆ ಕೈಗೊಳ್ಳಲಾಗಿದೆ. 4,81,069 ಮೆಟ್ರಿಕ್ ಟನ್ ಉತ್ಪಾದನೆಯಾಗಿದೆ. ಹವಾಮಾನ ವೈಪರೀತ್ಯ ಹಾಗೂ ಬಿಳಿಸುಳಿ ರೋಗ ಕಾರಣದಿಂದ ಇಳುವರಿಯಲ್ಲಿ ಕುಸಿತ ಕಂಡಿದೆ. ಹೀಗಾಗಿ ಬೆಂಬಲ ಬೆಲೆಯಡಿ ಮೆಕ್ಕೆಜೋಳ ಖರೀದಿಸಬೇಕೆಂದು ಹಾಸನ ಸೇರಿ ರಾಜ್ಯಾದ್ಯಂತ ರೈತರು ಬೀದಿಗಿಳಿದು ಹೋರಾಟ ನಡೆಸಿದ್ದರು. ಅನ್ನದಾತರ ಆಕ್ರೋಶಕ್ಕೆ ಮಣಿದ ಸರ್ಕಾರ ಡಿ. 7ರಂದು ಪ್ರತಿ ಕ್ವಿಂಟಾಲ್‌ಗೆ 2,400 ರೂ.ನಂತೆ ಖರೀದಿಗೆ ಸಮ್ಮತಿ ಸೂಚಿಸಿತ್ತು. ಆ ಪ್ರಕಾರ ಜಿಲ್ಲೆಯಲ್ಲಿ 10 ಸಾವಿರ ಮೆಟ್ರಿಕ್ ಟನ್ ಮೆಕ್ಕೆಜೋಳವನ್ನು ಪಶು ಆಹಾರ ಉತ್ಪಾದನೆಗಾಗಿ ಕೆಎಂಎಫ್ ಮೂಲಕ ಖರೀದಿಸಲು ಆದೇಶಿಸಿತು. ಅದಕ್ಕೆ ಒಪ್ಪದ ರೈತರು ಕನಿಷ್ಠ 25 ಸಾವಿರ ಮೆಟ್ರಿಕ್ ಟನ್ ಖರೀದಿಸಬೇಕೆಂದು ಪಟ್ಟು ಹಿಡಿದರು. ಈ ವಿಚಾರವಾಗಿ ಕೆಎಂಎಫ್ ಹಾಗು ರೈತರ ನಡುವೆ ತೀವ್ರ ವಾಗ್ವಾದವೂ ನಡೆಯಿತು. ಈ ಪರಿಸ್ಥಿತಿಯನ್ನು ಮನಗಂಡ ಜಿಲ್ಲಾಡಳಿತ ಬೆಲೆ ವ್ಯತ್ಯಾಸ ಪಾವತಿ ಯೋಜನೆಯಡಿ ಮೆಕ್ಕೆಜೋಳ ಖರೀದಿಸಬೇಕೆಂದು ಪ್ರಸ್ತಾವನೆ ಸಲ್ಲಿಸಿದ ಹಿನ್ನಲೆಯಲ್ಲಿ ಹಸಿರು ನಿಶಾನೆ ದೊರೆತಿದೆ. ಸಕಲೇಶಪುರ ಹೊರತುಪಡಿಸಿ ಜಿಲ್ಲೆಯ ಎಲ್ಲಾ ತಾಲ್ಲೂಕಿನ ಕೃಷಿ ಉತ್ಪನ್ನ ಮಾರುಕಟ್ಟೆಗಳಲ್ಲಿ ಸೋಮವಾರದಿಂದ ನೋಂದಣಿ ಪ್ರಕ್ರಿಯೆ ಪ್ರಾರಂಭಾಗಲಿದೆ. ಅದಕ್ಕಾಗಿ ಎಪಿಎಂಸಿ



ಸಕಲ ಸಿದ್ಧತೆ ಮಾಡಿಕೊಂಡಿದೆ.

### ರೈತರಿಗೆ ಸಿಗುವ ಬೆಲೆ ಎಷ್ಟು

ಬೆಲೆ ವ್ಯತ್ಯಾಸ ಪಾವತಿ ಯೋಜನೆಯಡಿ ಮೆಕ್ಕೆಜೋಳ ಖರೀದಿಸಿದ ಮಾತ್ರಕ್ಕೆ ರೈತರಿಗೆ ಪ್ರತಿ ಕ್ವಿಂಟಾಲ್‌ಗೆ 2400 ರೂ. ಸಿಗುವುದಿಲ್ಲ. ರೈತರೇ ನೇರವಾಗಿ ಎಪಿಎಂಸಿಗೆ ಜೋಳವನ್ನು ಮಾರಾಟ ಮಾಡಬಹುದಾದರೂ ಇಲ್ಲಿ ಮಧ್ಯವರ್ತಿಗಳಿಗೂ ಅವಕಾಶ ಕಲ್ಪಿಸಲಾಗಿದೆ. ಗ್ರಾಮೀಣ ಪ್ರದೇಶದಿಂದ ಮಧ್ಯವರ್ತಿಗಳು ಮೆಕ್ಕೆಜೋಳವನ್ನು ಖರೀದಿಸಿ ಎಪಿಎಂಸಿಗೆ ನೀಡುತ್ತಾರೆ. ಪ್ರಸ್ತುತ ಮಾರುಕಟ್ಟೆಯಲ್ಲಿ ಪ್ರತಿ ಕ್ವಿಂಟಾಲ್‌ಗೆ 1,900 ರೂ. ದರ ನಿಗದಿಯಾಗಿದ್ದು ವರ್ತಕರು ಅಷ್ಟು ಹಣವನ್ನು ರೈತರಿಗೆ ನೀಡುತ್ತಾರೆ. ಆ ಬಳಿಕ ರೈತರ ಖಾತೆಗೆ ಪ್ರತಿ ಕ್ವಿಂಟಾಲ್‌ಗೆ 250 ರೂ. ಸರ್ಕಾರದಿಂದ ಡಿಬಿಟಿ ಮೂಲಕ ಪಾವತಿಯಾಗಲಿದೆ. ಇಲ್ಲಿ ಮಧ್ಯವರ್ತಿಗಳಿಗೆ ಎಪಿಎಂಸಿಯಿಂದ ಪ್ರತ್ಯೇಕ ಲಾಭಾಂಶ ಸಂದಾಯವಾಗಲಿದೆ. ಈ ಯೋಜನೆಯಿಂದ ರೈತರಿಗೆ ಕ್ವಿಂಟಾಲ್‌ಗೆ 150 ರಿಂದ 250 ರೂಪಾಯಿ ಹೆಚ್ಚುವರಿಯಾಗಿ ಸಿಗುವ ಸಾಧ್ಯತೆಗಳಿವೆ. ರೈತರ ನಿರಂತರ ಹೋರಾಟದ ಪ್ರಯತ್ನವಾಗಿ ಸ್ವಲ್ಪ ಲಾಭವಾಗಿದೆ ಎನ್ನಬಹುದು.

### 2.50 ಲಕ್ಷ ಕ್ವಿಂಟಾಲ್ ಖರೀದಿ

ಬೆಳೆ ವ್ಯತ್ಯಾಸ ಪಾವತಿ ಯೋಜನೆಯಡಿ 2.50 ಲಕ್ಷ ಕ್ವಿಂಟಾಲ್ ಮೆಕ್ಕೆಜೋಳ ಖರೀದಿಗೆ ಅವಕಾಶವಿದೆ. ಫ್ರೂಟ್ಸ್ ಐಡಿ ಹೊಂದಿರುವ ರೈತ ಪ್ರತಿ ಎಕರೆಗೆ ಕನಿಷ್ಠ 12 ರಿಂದ ಗರಿಷ್ಠ 50 ಕ್ವಿಂಟಾಲ್ ವರೆಗೆ ಮಾರಾಟ ಮಾಡಬಹುದು. ಮಧ್ಯವರ್ತಿಗಳು ಖರೀದಿಗೆ ಬಂದಾಗ ಫ್ರೂಟ್ಸ್ ಐಡಿ, ಆಧಾರ್ ನಂಬರ್ ಮತ್ತು ಬ್ಯಾಂಕ್ ಖಾತೆ ಸಂಖ್ಯೆ ಕೊಟ್ಟರೆ ಕೆಲಸ ಸುಲಭವಾಗಲಿದೆ. ಮಾರುಕಟ್ಟೆಗೆ ಬರಲು ಸಾಧ್ಯವಾಗದೆ ಇರುವ ರೈತರು ಮಧ್ಯವರ್ತಿಗಳ ನೆರವಿನಿಂದ ಯೋಜನೆಯ ಲಾಭ ಪಡೆಯಲು ಮುಂದಾಗಿದ್ದಾರೆ. ಈ ಪ್ರಕ್ರಿಯೆ 30 ದಿನಗಳ ವರೆಗೆ ಇರಲಿದೆ.

### ಕೆಎಂಎಫ್‌ನಿಂದ ಹಂತ ಹಂತವಾಗಿ ಹಣ ಜಮೆ

ಕ್ವಿಂಟಾಲ್‌ಗೆ 2,400 ರೂ.ನಂತೆ ಮೆಕ್ಕೆಜೋಳ ಖರೀದಿಸಿದ್ದ ಕೆಎಂಎಫ್ ಒಂದು ತಿಂಗಳಾದರೂ ರೈತರ ಖಾತೆಗೆ ಹಣ ಜಮೆ ಮಾಡಿರಲಿಲ್ಲ. ಈ ಸಂಬಂಧ ರೈತ ಸಂಘಟನೆ ಮುಖಂಡರು ಜಿಲ್ಲಾಧಿಕಾರಿ ಅವರಿಗೆ ಮನವಿ ಸಲ್ಲಿಸಿದ ಬಳಿಕ ಹಣ ಜಮೆಯಾಗುತ್ತಿದೆ. ನಿತ್ಯ 150 ರಿಂದ 200 ರೈತರಿಗೆ ಹಣ ಪಾವತಿಯಾಗುತ್ತಿದೆಯೆಂದು ರೈತ ಮುಖಂಡ ಪಿ.ಭೂಮೇಶ್ ಅವರು ಹೇಳಿದ್ದಾರೆ.

# ನಾಗೇನಹಳ್ಳಿ ಸರ್ಕಾರಿ ಶಾಲೆ ರಕ್ಷಣೆಗೆ ಆಗ್ರಹಿಸಿ ಪ್ರತಿಭಟನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್**

ಹಾಸನ: ಮ್ಯಾಗ್ನೆಟ್ ಹೆಸರಿನಲ್ಲಿ ತಾಲ್ಲೂಕಿನ ನಾಗೇನಹಳ್ಳಿ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯನ್ನು ಸರ್ಕಾರ ಪಕ್ಕದ ಶಾಲೆಯೊಂದಿಗೆ ವಿಲೀನಗೊಳಿಸಲು ಮುಂದಾಗಿದ್ದು, ಅವೈಜ್ಞಾನಿಕ ನಿರ್ಧಾರದಿಂದ ಹಿಂದೆ ಸರಿಯಬೇಕೆಂದು ಆಗ್ರಹಿಸಿ ಎಐಡಿಎಸ್‌ಓ ನೇತೃತ್ವದಲ್ಲಿ ಪ್ರತಿಭಟನೆ ನಡೆಸಲಾಯಿತು. ಎಐಡಿಎಸ್‌ಓ ಜಿಲ್ಲಾ ಕಾರ್ಯಕರ್ತೆ ಸುಷ್ಮಾ ಮಾತನಾಡಿ, ಸರ್ಕಾರಿ ಶಾಲೆಗಳಿಗೆ ಬೀಗ ಹಾಕಿ, ಬಡ ರೈತ, ಕೂಲಿ ಕಾರ್ಮಿಕರ ಮಕ್ಕಳನ್ನು ಶಿಕ್ಷಣದಿಂದ ವಂಚಿತರನ್ನಾಗಿಸಿ, ಶಿಕ್ಷಣವನ್ನು ವ್ಯಾಪಾರ ಮಾಡಲು ಸರ್ಕಾರ ಮುಂದಾಗಿದೆ. ಒಂದು ಊರಿನಿಂದ ಇನ್ನೊಂದು ಊರಿಗೆ ಹೋಗಿ ಶಿಕ್ಷಣ ಪಡೆಯುವುದು ಖಂಡನೀಯ ಎಂದರು.

ಗ್ರಾಮಸ್ಥರು ಮಾತನಾಡಿ, ಊರಿನಲ್ಲಿ ಕೆಲವು ವರ್ಷಗಳ ಹಿಂದೆ ಶಾಲೆಯೇ ಇರಲಿಲ್ಲ. ನಾವೆಲ್ಲರೂ ಪಕ್ಕದ ಊರಿನ ಶಾಲೆಗೆ ಹೋಗಿ ಓದುವ ಪರಿಸ್ಥಿತಿ ಇತ್ತು. ಆದರೆ ಅದು ಸುಲಭವಾಗಿರಲಿಲ್ಲ.




ಶಾಲೆಗೆ ಹೋಗಲು ರಸ್ತೆ ಇರಲಿಲ್ಲ, ಹೊಲ ಗದ್ದೆಗಳ ಮಧ್ಯೆ ನಡೆದುಕೊಂಡು ಹೋಗುತ್ತಿದ್ದೆವು. ಅದರಿಂದ ನಾವು ಕನಸು ಕಂಡ ಶಿಕ್ಷಣವನ್ನೇ ಪಡೆದುಕೊಳ್ಳಲು ಆಗಲಿಲ್ಲ. ಸಾಕಷ್ಟು ಹೋರಾಟದ ಫಲವಾಗಿ ಶಾಲೆ ಮಂಜೂರಾಗಿದೆ. ಅದನ್ನು ಕಳೆದುಕೊಳ್ಳಲು ಯಾರೂ ಇಷ್ಟಪಡುವುದಿಲ್ಲವೆಂದರು.

ಊರಿನ ಶಾಲೆಯಲ್ಲಿ ಹಲವಾರು ವಿದ್ಯಾರ್ಥಿಗಳು ಅಕ್ಷರ ಕಲಿತು, ಉನ್ನತ ವ್ಯಾಸಂಗಕ್ಕೆ ಹೋಗುತ್ತಿದ್ದಾರೆ. ಬಣ್ಣ ಬಣ್ಣದ ಮಾತುಗಳಿಂದ ನೀವು ಬಡವರಿಂದ ಶಿಕ್ಷಣವನ್ನು ಕಿತ್ತುಕೊಳ್ಳುತ್ತೀರ ಎಂದರೆ ನಾವೆಲ್ಲರೂ ಒಗ್ಗಟ್ಟಾಗಿ ಹೋರಾಟ ಮಾಡುತ್ತೇವೆ. ಎಂತಹ ಪರಿಸ್ಥಿತಿ ಬಂದರೂ ಕೂಡ ಶಾಲೆ ಉಳಿಸಿಕೊಳ್ಳಲು ಹೋರಾಡುತ್ತೇವೆ ಎಂದರು.

ಎಐಡಿಎಸ್‌ಓ ಜಿಲ್ಲಾಧ್ಯಕ್ಷೆ ಚೈತ್ರ, ಕಾರ್ಯದರ್ಶಿ ಸುಷ್ಮಾ, ಮತ್ತು ಗ್ರಾಮಸ್ಥರಾದ ಯೋಗೀಶ್ ನಾಯಕ್, ರಾಹುಲ್, ಯಶಸ್, ಪುನೀತ್, ಕುಮಾರ್ ನಾಯಕ್ ಹಾಗೂ ಇತರರಿದ್ದರು.

# ವೃತ್ತಿ ಜೀವನದಲ್ಲಿ ಆತ್ಮಸ್ಥೈರ್ಯ ಮುಖ್ಯ: ಕವಿತಾ



ಹಾಸನ: ಶಿಬಿರದಲ್ಲಿ ಕಲಿತ ಶಿಸ್ತು, ಸಮಯ ಪಾಲನೆ ಹಾಗೂ ನಾಯಕತ್ವದ ಗುಣಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಜೊತೆಗೆ ವೃತ್ತಿ ಜೀವನದಲ್ಲಿ ಯಾವುದೇ ಕಾರಣಕ್ಕೂ ಧೃತಿಗೆಡದೆ ಆತ್ಮಸ್ಥೈರ್ಯದಿಂದ ಕರ್ತವ್ಯ ನಿರ್ವಹಿಸಬೇಕು ಎಂದು ಮಹಾನಗರ ಪಾಲಿಕೆ ಇಂಜಿನಿಯರ್ ಕೆ.ಆರ್.ಕವಿತಾ ಹೇಳಿದರು.

ನಗರದ ಹಿಮ್ಸ್ ಆವರಣದಲ್ಲಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಪ್ರಾಂತೀಯ ನಿರ್ದೇಶನಾಲಯ, ರಾಷ್ಟ್ರೀಯ ಸೇವಾ ಯೋಜನೆ ಹಾಗೂ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ ವತಿಯಿಂದ ಭಾನುವಾರ ಹಮ್ಮಿಕೊಂಡಿದ್ದ ರಾಷ್ಟ್ರೀಯ ಭಾವೈಕ್ಯತಾ ಶಿಬಿರ-2026ರ ಧ್ವಜ ವಂದನೆ ಮಾಡಿ ಮಾತನಾಡಿದರು.

ನಮ್ಮ ವೃತ್ತಿಯಲ್ಲಿ ಯಾವುದೇ ಅಡೆತಡೆಗಳು ಬಂದರೂ ಎದುರಿಸುವ ಮತ್ತು ದಕ್ಷತೆಯಿಂದ ನಿರ್ವಹಣೆ ಮಾಡುವುದನ್ನು ಕಲಿಯಬೇಕು. ಗ್ರಾಮೀಣ ಭಾಗದಿಂದ ಬಂದಿರುವ ನಾವು ಸಮಾಜಕ್ಕೆ ಕೊಡುಗೆಯಾಗಿ ಒಳಿತನ್ನು ನೀಡುವ ಪ್ರಯತ್ನ ಮಾಡಬೇಕು. ತಂದೆ-ತಾಯಿಗೆ ಗೌರವ ಕೊಡುವ ನಿಟ್ಟಿನಲ್ಲಿ ಮತ್ತು ಸಮಾಜದ ಜವಾಬ್ದಾರಿಯನ್ನು ಉತ್ತಮ ರೀತಿಯಲ್ಲಿ ಕೊಂಡೊಯ್ಯಬೇಕೆಂದು ಸಂದೇಶ ನೀಡಿದರು.

ಬೆಂಗಳೂರು, ಚೆನ್ನೈ, ತಿರುವನಂತಪುರ, ಪುಣೆ, ಹೈದರಾಬಾದ್, ನವದೆಹಲಿ, ಭುವನೇಶ್ವರ, ಚಂಡೀಗಡ, ಜೈಪುರ, ಲಕ್ನೋ, ಕೊಲ್ಕತ್ತಾ ಸೇರಿ 10 ರಾಜ್ಯಗಳ 200ಕ್ಕೂ ಹೆಚ್ಚು ಶಿಬಿರಾರ್ಥಿಗಳು ಭಾಗವಹಿಸಿದ್ದರು.

ಭಾರತ ಸೇವಾದಳದ ವಲಯ ಸಂಘಟಕಿ ವಿ.ಎಸ್.ರಾಣಿ, ಎನ್‌ಎಸ್‌ಎಸ್ ಕಾರ್ಯಕ್ರಮ ಅಧಿಕಾರಿ ನಿಚಿತಾ ಕುಮಾರಿ, ಜಿ.ದೀಪ, ಎಚ್.ಮಹೇಶ್, ಡಾ. ವೀಣಾ, ದಂತ ವೈದ್ಯೆ ಡಾ. ಕಾವ್ಯಶ್ರೀ ಇತರರಿದ್ದರು.

# ಜೆಡಿಎಸ್ ಕಾರ್ಯಕರ್ತರಿಗೆ ವಿನಾಕಾರಣ ತೊಂದರೆ: ಆರೋಪ

**ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್**

ಬೇಲೂರು: ದಶಕಗಳಿಂದ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರಿಗೆ ಹೆಗಲು ಕೊಟ್ಟು ನಿಂತಿರುವ ಜೆಡಿಎಸ್ ಕಾರ್ಯಕರ್ತರಿಗೆ ಸುಖಾ ಸುಮ್ಮನೆ ತೊಂದರೆ ಕೊಟ್ಟರೆ ಸಹಿಸುವುದಿಲ್ಲ ಎಂದು ಮಾಜಿ ಸಚಿವ ಹೆಚ್.ಡಿ.ರೇವಣ್ಣ ಗುಡುಗಿದರು.




ಪಟ್ಟಣದ ವೀರಶೈವ ಕಲ್ಯಾಣ ಮಂಟಪದಲ್ಲಿ ಏರ್ಪಡಿಸಿದ್ದ ತಾಲ್ಲೂಕು ಜೆಡಿಎಸ್ ಕಾರ್ಯಕರ್ತರ ಸಭೆಯಲ್ಲಿ ಮಾತನಾಡಿ, ಜೆಡಿಎಸ್ ಕಾರ್ಯಕರ್ತರ ಪಕ್ಷ. ಅವರಿಗೆ ಯಾರಾದರೂ ನೋವು ಕೊಟ್ಟರೆ ಕೈಕಟ್ಟಿ ಕೂರುವುದಿಲ್ಲ. ಪ್ರತ್ಯುತ್ತರ ನೀಡುವುದು ಖಚಿತ ಎಂದು ಆಕ್ರೋಶ ವ್ಯಕ್ತಪಡಿಸಿದರು. ಜಿಲ್ಲೆಯಲ್ಲಿ ನಮ್ಮ ಶಕ್ತಿ ಕುಂದಿಸಲು ಕಾಂಗ್ರೆಸ್ ಶತ ಪ್ರಯತ್ನ ನಡೆಸುತ್ತಿದೆ. ಎರಡೂ ಬಾರಿ ಸಮಾವೇಶ ಮಾಡಿ ಜೆಡಿಎಸ್ ನಿರ್ಮೂಲನೆ ಮಾಡುವ ಶಪಥ ಮಾಡಿದ್ದಾರೆ. ಅವರು ಏನೇ ತಂತ್ರಗಾರಿಕೆ ಮಾಡಿದರೂ ನಮ್ಮ ಶಕ್ತಿ ಕುಗ್ಗಿಸಲು ಸಾಧ್ಯವಿಲ್ಲ. ಕಾರ್ಯಕರ್ತರೇ ನಮ್ಮ ಆಸ್ತಿ. ಕಾಂಗ್ರೆಸ್‌ನ ಕರ್ಮಗಳಿಗೆ ಮುಂದಿನ ದಿನಗಳಲ್ಲಿ ಉತ್ತರ ನೀಡಲಾಗುತ್ತದೆ ಎಂದರು.ಜ. 24 ರಂದು ಹಾಸನದಲ್ಲಿ ಕಾರ್ಯಕರ್ತರ ಸಮಾವೇಶ ಹಮ್ಮಿಕೊಂಡಿದ್ದು ತಾಲ್ಲೂಕಿನಿಂದ 20 ಸಾವಿರ ಜನರು ಭಾಗವಹಿಸಬೇಕು. ಬೂತ್ ಮಟ್ಟದಿಂದ ಪಕ್ಷ ಸಂಘಟನೆಗೆ ಈಗಿನಿಂದಲೇ ಆದ್ಯತೆ ನೀಡಬೇಕು. ಮುಂಬರುವ ತಾಲ್ಲೂಕು, ಜಿಲ್ಲಾ ಪಂಚಾಯಿತಿ ಚುನಾವಣೆ ಹಾಗೂ 2028ರ ವಿಧಾನಸಭೆ ಚುನಾವಣೆಗೆ ತಯಾರಾಗಬೇಕೆಂದರು.

ಕಾಂಗ್ರೆಸ್‌ನವರು ಮಾತೆತ್ತಿದರೆ ಅಭಿವೃದ್ಧಿ ಮಾಡಿದ್ದೇವೆ ಎನ್ನುತ್ತಾರೆ. ಬೇಲೂರು ಕ್ಷೇತ್ರ ಅಭಿವೃದ್ಧಿಗೆ ಎಷ್ಟು ಅನುದಾನ ನೀಡಿದ್ದಾರೆಂಬುದರ ಕುರಿತು ಶ್ವೇತಪತ್ರ ಹೊರಡಿಸಲಿ. ಬೇಲೂರಿಗೆ ಇಪ್ಪತ್ತು ವರ್ಷಗಳ ಹಿಂದೆ ರೈಲ್ವೆ ಮಾರ್ಗಕ್ಕೆ ಹೆಚ್.ಡಿ. ದೇವೇಗೌಡ ಅವರು ಶ್ರಮ ಹಾಕಿದ್ದರು. ಆದರೆ, ಕೆಲವರ ಪಿತೂರಿಯಿಂದ ಭೂಮಿಗೆ ಪರಿಹಾರ ನೀಡಲು ಸಾಧ್ಯವಾಗಿಲ್ಲ, ಬೇಲೂರು-ಹಾಸನ ನಾಲ್ಕು ಪಥದ ರಸ್ತೆಗೆ 661 ಕೋಟಿ ರೂ.ಅನುದಾನ ನೀಡಿದ್ದು ಹೆಚ್.ಡಿ. ದೇವೇಗೌಡ ಮತ್ತು ಹೆಚ್.ಡಿ.ಕುಮಾರಸ್ವಾಮಿ. ಕಾಂಗ್ರೆಸ್‌ನವರು ಬೊಗಳೆ ಬಿಡುತ್ತಾರೆ ಹೊರತು ಅಭಿವೃದ್ಧಿಗೆ ಹಣ ನೀಡುವುದಿಲ್ಲ. ತಾಲ್ಲೂಕು ಅಭಿವೃದ್ಧಿಗೆ ಕಾಂಗ್ರೆಸ್ ಕೊಡುಗೆ ಶೂನ್ಯವೆಂದು ವಾಗ್ದಾಳಿ ನಡೆಸಿದರು. ಜನದಟ್ಟಣೆ ತೋರಿಸಬೇಕು, ಪುಕ್ಕಟೆ ಪ್ರಚಾರ ಪಡೆಯಬೇಕೆಂದು ಕಾಂಗ್ರೆಸ್‌ನವರು ನಡೆಸಿದ ಸಮಾವೇಶಕ್ಕೆ ಪುರಸಭೆ ಸಿಬ್ಬಂದಿ, ಆಶಾ, ಅಂಗನವಾಡಿ ಕಾರ್ಯಕರ್ತರನ್ನು ಕರೆ ತಂದಿದ್ದರು. ನಾವು ಅವರ ಹಾಗೆ ಮಾಡುವುದಿಲ್ಲ. ಲಕ್ಷಾಂತರ ಸಂಖ್ಯೆಯಲ್ಲಿ ಪಕ್ಷದ ನಿಷ್ಠಾವಂತ ಕಾರ್ಯಕರ್ತರು ಭಾಗವಹಿಸುತ್ತಾರೆಂಬ ಪೂರ್ಣ ವಿಶ್ವಾಸ ನಮಗಿದೆ. ಕೇವಲ ಗ್ಯಾರಂಟಿ ಹೆಸರು ಹೇಳಿದರೆ ಜನರು ಮರಳಾಗುವುದಿಲ್ಲ. ವೈರಿಗಳಿಗೆ ನಮ್ಮ ಶಕ್ತಿ ತೋರಿಸಲು ಕಾರ್ಯಕರ್ತರು ಕೈಜೋಡಿಸಬೇಕು. ಪಕ್ಷ ಸಂಘಟನೆ ಮೂಲಕ ಅಧಿಕಾರ ಹಿಡಿದು ಏನು ಎಂಬುದನ್ನು ತೋರಿಸೋಣವೆಂದರು.

ಮಾಜಿ ಶಾಸಕ ಕೆ.ಎಸ್.ಲಿಂಗೇಶ್ ಮಾತನಾಡಿ, ಹಾಸನದಲ್ಲಿ ನಡೆಯುವ ಸಮಾವೇಶದಲ್ಲಿ 2 ಲಕ್ಷಕ್ಕೂ ಅಧಿಕ ಜನರು ಪಾಲ್ಗೊಳ್ಳಲಿದ್ದಾರೆ. ರಾಜ್ಯದಲ್ಲಿ ಜೆಡಿಎಸ್ ಪಕ್ಷವನ್ನು ಮತ್ತೊಮ್ಮೆ ಅಧಿಕಾರಕ್ಕೆ ತರಬೇಕು. 2028ಕ್ಕೆ ಮೈತ್ರಿ ಕೂಟದ ಅಭ್ಯರ್ಥಿ ಮುಖ್ಯಮಂತ್ರಿಯಾಗಲಿದ್ದಾರೆ. ಬೇಲೂರಿನಲ್ಲಿ ನಮ್ಮ ಪಕ್ಷದ ಅಭ್ಯರ್ಥಿಯೇ ಸ್ಪರ್ಧಿಸಲಿದ್ದು ಗೆಲುವು ಶತಸಿದ್ಧವೆಂದು ವಿಶ್ವಾಸ ವ್ಯಕ್ತಪಡಿಸಿದರು.

ಜೆಡಿಎಸ್ ತಾಲ್ಲೂಕು ಅಧ್ಯಕ್ಷ ತೊ.ಚ.ಅನಂತ ಸುಬ್ಬರಾಯ ಅವರು ಮಾತನಾಡಿ, ತಾಲ್ಲೂಕಿನಲ್ಲಿ ಹೋಬಳಿ ಮಟ್ಟದ ಸಭೆ ನಡೆಸಿ ಹೊಸ ಮುಖಗಳಿಗೆ ಅವಕಾಶ ನೀಡಲಾಗುವುದು. ಕಾಡಾನೆ ಸಮಸ್ಯೆಗೆ ಪರಿಹಾರ ಕಲ್ಪಿಸಲು ಹೆಚ್ಚಿನ ಕಾಳಜಿ ವಹಿಸಿರುವುದು ನಮ್ಮ ಪಕ್ಷ. ಮಲೆನಾಡು ಅಭಿವೃದ್ಧಿಗಾಗಿ, ಸಾರ್ವಜನಿಕರ ಹಿತ ಕಾಪಾಡಲು ನಮ್ಮ ನಾಯಕರು ಹೋರಾಡುತ್ತಿದ್ದಾರೆ. ಮೈತ್ರಿ ವಿಚಾರವಾಗಿ ನಮ್ಮ ನಾಯಕರು ತೆಗೆದುಕೊಳ್ಳುವ ನಿರ್ಧಾರಕ್ಕೆ ಬದ್ಧ ಎಂದರು.

ಹೆಚ್‌ಡಿಸಿ ಬ್ಯಾಂಕ್ ನಿರ್ದೇಶಕ ಎಂ.ಎ.ನಾಗರಾಜ್, ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷ ಬಿ.ಡಿ. ಚಂದ್ರೇಗೌಡ, ಜಿ.ಟಿ.ಇಂದಿರಾ, ಉಪಾಧ್ಯಕ್ಷ ರಾಜಶೇಖರ್, ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯೆ ಲತಾ ಮಂಜೇಶ್ವರಿ, ಮರಿಯಪ್ಪ, ತಾಲ್ಲೂಕು ಪಂಚಾಯಿತಿ ಮಾಜಿ ಅಧ್ಯಕ್ಷ ರಂಗೇಗೌಡ, ಸುಭಾನ್, ಅಶ್ವಥ್, ಸದಸ್ಯರಾದ ರವಿ ಬಲ್ಲೇನಹಳ್ಳಿ, ಮುಖಂಡರಾದ ನಟರಾಜ್, ರಾಮಚಂದ್ರ, ಭಾರತೀ ಅರುಣಕುಮಾರ್, ಮೊಗಪ್ಪಗೌಡ, ದಿನೇಶ್,ನಾಗೇಶ್, ಸೋಮೇಶ್, ಸತೀಶ್ ಇತರರಿದ್ದರು.

# ಮಕ್ಕಳ ಮನಸ್ಸು ಶುಭ್ರ ಬಿಳಿ ಹಾಳೆಯಂತೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್**

ಚನ್ನರಾಯಪಟ್ಟಣ: ಮಕ್ಕಳ ಮನಸ್ಸು ಶುಭ್ರವಾದ ಬಿಳಿಯ ಹಾಳೆ ಇದ್ದಂತೆ ಎಂದು ನಟ, ಗಾಯಕ ಶಶಿಧರ್ ಕೋಟೆ ಹೇಳಿದರು.

ತಾಲೂಕಿನ ಕನುವನಘಟ್ಟ ಗ್ರಾಮದಲ್ಲಿ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ ವತಿಯಿಂದ ಆಯೋಜಿಸಿದ್ದ ಕಲಾಸಿರಿ-2026 ಹಾಗೂ ಶಾಲಾ ವಾರ್ಷಿಕೋತ್ಸವ ಉದ್ಘಾಟಿಸಿ ಮಾತನಾಡಿ, ಸುಂದರ ಬದುಕನ್ನು ಒಮ್ಮೆ ಹಾಳು ಮಾಡಿದರೆ ಮತ್ತೊಮ್ಮೆ ಸರಿಪಡಿಸಲು ಸಾಧ್ಯವಿಲ್ಲ ಎಂದರು. ಅಕ್ಕ-ಪಕ್ಕದ ಮನೆಯ ಮಕ್ಕಳನ್ನು ತೋರಿಸಿ, ಇಲ್ಲವೇ ಹೆಚ್ಚು ಅಂಕಗಳನ್ನು ಗಳಿಸುವ ನಿಟ್ಟಿನಲ್ಲಿ ಓದುವಂತೆ ಒತ್ತಡ ಹಾಕಬೇಡಿ. ಇದು ಮಕ್ಕಳ ಮನಸ್ಸಿನ ಮೇಲೆ ಕೆಟ್ಟ ಪ್ರಭಾವ ಬೀರಲಿದ್ದು ಮಾನಸಿಕ ಖಿನ್ನತೆಗೆ ಒಳಗಾಗುವ ಸಾಧ್ಯತೆ ಹೆಚ್ಚಾಗಿರುತ್ತದೆ ಎಂದು ಆತಂಕ ವ್ಯಕ್ತಪಡಿಸಿದರು.

ಮಕ್ಕಳ ದೈನಂದಿನ ಚಟುವಟಿಕೆಯ ಮೇಲೆ ಪಾಲಕರು ಗಮನ ಹರಿಸಬೇಕು. ಜೊತೆಗೆ ಮಕ್ಕಳ ಮನಸ್ಸಿನಲ್ಲಿ ಅಡಗಿರುವ ಪ್ರತಿಭೆ ಹಾಗೂ ಉನ್ನತ ಆಸೆಯನ್ನು ಗುರುತಿಸಿ ಪ್ರೋತ್ಸಾಹಿಸಬೇಕು. ಇದರಿಂದ ಮಕ್ಕಳು ಭವಿಷ್ಯದಲ್ಲಿ ಬದುಕನ್ನು ಸದೃಢವಾಗಿ ಕಟ್ಟಿಕೊಳ್ಳುವಲ್ಲಿ ಸಹಕಾರಿಯಾಗಲಿದೆ ಎಂದು ಸಲಹೆ ನೀಡಿದರು.



ಕ್ಷೇತ್ರ ಸಂಪನ್ಮೂಲ ಸಮನ್ವಯಾಧಿಕಾರಿ ಅನಿಲ್ ಮಾತನಾಡಿ, ಟೀವಿ ವೀಕ್ಷಣೆ ಹಾಗೂ ಮೊಬೈಲ್ ಬಳಕೆಯಿಂದ ಮಕ್ಕಳನ್ನು ದೂರ ಇಡುವುದರ ಜೊತೆಗೆ ಪಾಲಕರು ಸಹ ಬಿಡುವು ಮಾಡಿಕೊಂಡು ಮಕ್ಕಳೊಂದಿಗೆ ಕುಳಿತು ಓದು-ಬರಹದ ಬಗ್ಗೆ ಕಣ್ಣಾಡಿಸಬೇಕು. ಇದರಿಂದ ಮಕ್ಕಳು ಭವಿಷ್ಯದ ಉತ್ತಮವಾಗಿ ರೂಪಗೊಳ್ಳಲಿದೆ. ಆದರೆ ಕೆಲ ಪಾಲಕರು ತಾವೇ ಕುಳಿತು ಟೀವಿ ವೀಕ್ಷಣೆ ಹಾಗೂ ಮೊಬೈಲ್ ಬಳಕೆಯತ್ತ ಹೆಚ್ಚು ಸಮಯ ಕಳೆಯುವ ಬರದಲ್ಲಿ ಮಕ್ಕಳ ಶೈಕ್ಷಣಿಕ ವ್ಯವಸ್ಥೆಗೆ ಅಗತ್ಯ ಆದ್ಯತೆ ನೀಡುವಲ್ಲಿ ವಿಫಲರಾಗುತ್ತಿದ್ದಾರೆ ಎಂದು ಕಳವಳ ವ್ಯಕ್ತಪಡಿಸಿದರು.

ಕಲರವ ಎಂಬ ವಾರ್ಷಿಕ ಸಂಚಿಕೆ ಹಾಗೂ ಶಾಲೆಯ ಹಳೆ ವಿದ್ಯಾರ್ಥಿ ಕೆ.ಜೆ. ವೈಶಾಖ್ ಬರೆದಿರುವ ಧ್ರುವತಾರೆ ಪುಸ್ತಕವನ್ನು ಗಣ್ಯರು ಬಿಡುಗಡೆ ಮಾಡಿದರು. ನಂತರ ವಿದ್ಯಾರ್ಥಿಗಳು ಸಾಂಸ್ಕೃತಿಕ ಕಾರ್ಯಕ್ರಮ ನಡೆಸಿಕೊಟ್ಟರು. ರಾಜ್ಯ ಮಕ್ಕಳ ಸಾಹಿತ್ಯ ಪರಿಷತ್ ವತಿಯಿಂದ ಕಳೆದ ವರ್ಷ ಎಸ್‌ಎಸ್‌ಎಲ್ಸಿ ಪರೀಕ್ಷೆಯಲ್ಲಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಅಭಿನಂದಿಸಲಾಯಿತು.

ಗ್ರಾಮ ಪಂಚಾಯಿತಿ ಸದಸ್ಯರಾದ ಕೆ.ಎನ್.ಹರಿಪ್ರಸಾದ್, ಗೀತಾ, ನಾಗರತ್ನ, ಮಾಜಿ ಸದಸ್ಯ ಕೆ.ಟಿ.ನಾಗರಾಜ್, ಶಿಕ್ಷಣ ಸಂಯೋಜಕ ಶ್ರೀನಿವಾಸ್, ಹಿರಿಯ ಚಿತ್ರನಟ ಶಿವಕುಮಾರ್ ಆರಾಧ್ಯ, ಮಾನವ ಹಕ್ಕುಗಳ ತನಿಖಾ ಸಮಿತಿಯ ರಾಜ್ಯಾಧ್ಯಕ್ಷ ಕೆ.ಸಂತೋಷ್, ಜಿಲ್ಲಾಧ್ಯಕ್ಷ ತೇಜಸ್, ಪಿಡಿಒ ಕೆ.ಎಸ್.ಪ್ರಕಾಶ್, ಯುವ ರೈತ ಕೀರ್ತಿ, ಮಕ್ಕಳ ತಜ್ಞ ಡಾ.ಪವನ್, ಎಸ್‌ಡಿಎಂಸಿ ಅಧ್ಯಕ್ಷ ಗಂಗಾಧರ್, ಮುಖ್ಯಶಿಕ್ಷಕಿ ಡಿ.ಮಂಜಳಾ ಹಾಗೂ ಇತರರು ಇದ್ದರು.

# ಬೇಲೂರಿನಲ್ಲಿ ಸಂಕ್ರಾಂತಿ ಸುಗ್ಗಿ ಸಂಭ್ರಮ



**ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್**

ಬೇಲೂರು: ತಾಲ್ಲೂಕು ಒಕ್ಕಲಿಗರ ಮಹಿಳಾ ಸಂಘದಿಂದ ಪಟ್ಟಣದ ಒಕ್ಕಲಿಗರ ಸಮುದಾಯ ಭವನದಲ್ಲಿ ಆಯೋಜಿಸಿದ್ದ ಸಂಕ್ರಾಂತಿ ಸುಗ್ಗಿ ಸಂಭ್ರಮ, ಶ್ರೀ ಬಾಲಗಂಗಾಧರನಾಥ ಸ್ವಾಮೀಜಿ ಪುಣ್ಯಸ್ಮರಣೆ ಹಾಗೂ ರಾಷ್ಟ್ರಕವಿ ಕುವೆಂಪು ಜನ್ಮ ದಿನಾಚರಣೆಗೆ ಪುರಸಭೆ ಅಧ್ಯಕ್ಷೆ ಉಷಾ ಸತೀಶ್ ಉದ್ಘಾಟಿಸಿದರು.

ನಂತರ ಮಾತನಾಡಿದ ಅವರು, ಸಂಕ್ರಾಂತಿ ಕೃಷಿ, ಸಂಸ್ಕೃತಿ ಹಾಗೂ ಶ್ರಮದ ಗೌರವವನ್ನು ಸಾರುವುದಾಗಿದೆ. ಇಂತಹ ಸಾಂಸ್ಕೃತಿಕ ಕಾರ್ಯಕ್ರಮಗಳು ಸಮಾಜದಲ್ಲಿ ಏಕತೆ ಮತ್ತು ನಮ್ಮ ಸಂಸ್ಕೃತಿ, ಪರಂಪರೆಯ ಮೌಲ್ಯಗಳನ್ನು ಉಳಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತವೆ. ಆದಿಚುಂಚನಗಿರಿಯ ಶ್ರೀ ಬಾಲಗಂಗಾಧರನಾಥ ಸ್ವಾಮೀಜಿ ಅವರು ಸಮಾಜಮುಖಿ ಸೇವೆ ಹಾಗೂ ಕುವೆಂಪು ಅವರ ಮಾನವೀಯ ಮೌಲ್ಯಗಳು ಮುಂದಿನ ಪೀಳಿಗೆಗೆ ದಾರಿ ದೀಪವಾಗಿವೆಯೆಂದರು. ಮಹಿಳಾ ಒಕ್ಕಲಿಗರ ಸಂಘದ ಅಧ್ಯಕ್ಷೆ ಭಾರತೀಗೌಡ ಮಾತನಾಡಿ, ಒಕ್ಕಲಿಗರ ಮಹಿಳಾ ಸಂಘವು ಸಮಾಜದ ಸಬಲೀಕರಣ, ಸಂಸ್ಕೃತಿ ಸಂರಕ್ಷಣೆ ಹಾಗೂ ಮಹಿಳೆಯರ ಏಳಿಗೆಗೆ ನಿರಂತರವಾಗಿ ಶ್ರಮಿಸುತ್ತಿವೆ. ಇಂತಹ ಸಾಂಸ್ಕೃತಿಕ ಹಾಗೂ ಸಾಮಾಜಿಕ ಕಾರ್ಯಕ್ರಮಗಳು ಒಗ್ಗಟ್ಟು ಹೆಚ್ಚಿಸುತ್ತವೆ. ನಮ್ಮ ಸಂಘದ ಮೂಲಕ ಇನ್ನಷ್ಟು ಸಮಾಜಮುಖಿ ಕಾರ್ಯಕ್ರಮ ಕೈಗೊಳ್ಳಲಾಗುವುದು ಎಂದರು. ಪುಣೆಯ ಹರಿಣಿ ಗಣೇಶ್ ಮಾತನಾಡಿ, ಒತ್ತಡದ ಬದುಕು ನಡೆಸುತ್ತಿರುವ ಮನುಷ್ಯ ಮನಸ್ಸಿನ ಶಾಂತಿ ಹಾಗು ಆತ್ಮಸ್ಥೈರ್ಯಕ್ಕೆ ಧ್ಯಾನ ಅಗತ್ಯವಾಗಿದೆ. ಧ್ಯಾನದಿಂದ ಏಕಾಗ್ರತೆ ಹೆಚ್ಚುವುದಲ್ಲದೆ ಆರೋಗ್ಯವೂ ಸುಧಾರಿಸುತ್ತದೆ. ಪ್ರತಿದಿನ ಸ್ವಲ್ಪ ಸಮಯ ಧ್ಯಾನಕ್ಕೆ ಮೀಸಲಿಟ್ಟರೆ ವ್ಯಕ್ತಿತ್ವ ವಿಕಾಸನವಾಗುತ್ತದೆ. ವಿಶೇಷವಾಗಿ ಮಹಿಳೆಯರು ಧ್ಯಾನವನ್ನು ಜೀವನದ ಅವಿಭಾಜ್ಯ ಅಂಗವಾಗಿಸಿಕೊಂಡರೆ ಕುಟುಂಬ ಮತ್ತು ಸಮಾಜ ಎರಡರಲ್ಲೂ ಸಕಾರಾತ್ಮಕ ಬದಲಾವಣೆ ಸಾಧ್ಯವಾಗುತ್ತದೆ ಎಂದರು.

ಒಕ್ಕಲಿಗರ ಮಹಿಳಾ ಸಂಘದ ಗೌರವಾಧ್ಯಕ್ಷೆ ಶ್ರೀದೇವಿ, ಉಪಾಧ್ಯಕ್ಷೆ ಮುದ್ದಮ್ಮ, ಕಾರ್ಯದರ್ಶಿ ಕವಿತಾ, ಖಜಾಂಚಿ ಉಷಾ, ಪುರಸಭೆ ಸದಸ್ಯೆ ಜಮೀಲಾ ತೌಫಿಕ್ ಹಾಗೂ ಇತರರಿದ್ದರು.

# ಇತಿಹಾಸದಲ್ಲಿ ಈ ದಿನ

## ಜನವರಿ-13

**1898:** ಫ್ರೆಂಚ್ ಲೇಖಕ ಎಮಿಲ್ ಜೋಲಾ ತಮ್ಮ ಪ್ರಸಿದ್ಧ ಆಜಿನಾನು ಆರೋಪಿಸುತ್ತೇನೆಟಿಟಿ ಎಂಬ ತೆರೆದ ಪತ್ರವನ್ನು ಪ್ರಕಟಿಸಿದರು. ಇದು ಡ್ರೇಫಸ್ ಪ್ರಕರಣದಲ್ಲಿ ನ್ಯಾಯಕ್ಕಾಗಿ ಹೋರಾಟಕ್ಕೆ ದೊಡ್ಡ ತಿರುವು ನೀಡಿತು.

**1930:** ಮಿಕ್ಕಿ ಮೌಸ್ ಪಾತ್ರದ ಮೊದಲ ಕಾಮಿಕ್ ಸ್ಟ್ರಿಪ್ ಅಮೆರಿಕದಲ್ಲಿ ಪ್ರಕಟವಾಯಿತು. ಇದು ಜನಪ್ರಿಯ ಕಾರ್ಟೂನ್ ಸಂಸ್ಕೃತಿಗೆ ಹೊಸ ಅಧ್ಯಾಯ ಆರಂಭಿಸಿತು.

**1964:** ಆಫ್ರಿಕಾದ ಜಾಂಜಿಬಾರ್ ಕ್ರಾಂತಿ ನಡೆದಿದ್ದು, ಅಲ್ಲಿನ ಆಡಳಿತ ವ್ಯವಸ್ಥೆಯಲ್ಲಿ ಮಹತ್ವದ ರಾಜಕೀಯ ಬದಲಾವಣೆಗೆ ಕಾರಣವಾಯಿತು.

### ಜನನ

**1919:** ನಿರ್ಮಲಾ ಸೀತಾರಾಮನ್, ಭಾರತದ ಹಣಕಾಸು ಸಚಿವೆ

**1956:** ದಿನೇಶ್ ಲಾಲ ಯಾದವ್, ಭಾರತೀಯ ಚಲನಚಿತ್ರ ನಟ ಹಾಗೂ ಗಾಯಕ

### ಮರಣ

**1941:** ಜೇಮ್ಸ್ ಜಾಯ್ಸ್, ಪ್ರಸಿದ್ಧ ಐರಿಷ್ ಲೇಖಕ

**2008:** ಬಾಬಿ ಫಿಷರ್, ವಿಶ್ವಖ್ಯಾತ ಚೆಸ್ ಆಟಗಾರ




Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248